ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಶ್ರೇಯಾಂಕಾ ಪಾಟೀಲ (36ಕ್ಕೆ 4) ಮತ್ತು ರಾಧಾ ಯಾದವ್ (25ಕ್ಕೆ 3) ಅವರ ಕೈಚಳಕದ ನೆರವಿನಿಂದ ಭಾರತ ವನಿತೆಯರ ತಂಡವು ಸೋಮವಾರ ನಡೆದ ಟಿ-20 ವಿಶ್ವಕಪ್‌ನ ಮೊದಲ ಅಭ್ಯಾಸ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡವನ್ನು 26 ರನ್‌ಗಳಿಂದ ಮಣಿಸಿತು.

09 ಜೂನ್, 2026 ಮಂಗಳವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ : 90 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ನೈಸರ್ಗಿಕ ಕೃಷಿಯ ಸವಾಲುಗಳು » 2


ಅಪ್ಘಾನಿಸ್ತಾನದ ವಿರುದ್ಧ ಭಾರತಕ್ಕೆ ಐತಿಹಾಸಿಕ ಗೆಲುವು » 3


ರಸ್ತೆಯ ಎಲ್ಲೆಂದರಲ್ಲಿ ಕಸ : ಹೆಚ್ಚಿದ ದುರ್ನಾತ » 4

# ದೇವೇಗೌಡರಿಗೆ ತಪ್ಪಿದ ರಾಜ್ಯಸಭಾ ಟಿಕೆಟ್

## ಮೈತ್ರಿ ಅಭ್ಯರ್ಥಿಯಾಗಿ ನಾಗರಾಜ | ರಾಜಕೀಯ ವಲಯದಲ್ಲಿ ನಾನಾ ಚರ್ಚೆ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ಕಾಂಗ್ರೆಸ್ ಮೂರು ಮತ್ತು ಬಿಜೆಪಿ ತನ್ನ ಒಬ್ಬ ಅಭ್ಯರ್ಥಿ ಘೋಷಿಸಿದೆ. ಮರು ಆಯ್ಕೆ ಬಯಸಿದ್ದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರಿಗೆ ಟಿಕೆಟ್ ನೀಡದೆ ಬಿಜೆಪಿ ಪ್ರೊ.ಎಂ.ನಾಗರಾಜ ಅವರಿಗೆ ಮಣೆ ಹಾಕಿ ಅಚ್ಚರಿ ಮೂಡಿಸಿದೆ.

ಜೂನ್ 25 ರಂದು ದೇವೇಗೌಡರ ರಾಜ್ಯಸಭೆ ಅವಧಿ ಕೊನೆಗೊಳ್ಳಲಿದ್ದು, ಹೆಚ್.ಡಿ.ದೇವೇಗೌಡರು ಮತ್ತೊಮ್ಮೆ ರಾಜ್ಯಸಭೆ ಪ್ರವೇಶಿಸುತ್ತಾರೆಂಬ ನಿರೀಕ್ಷೆ ಹುಸಿಯಾಗಿದೆ. ದೇವೇಗೌಡರು ಇಲ್ಲವೇ ಮಾಜಿ ಸಂಸದೆ ಸುಮಲತಾ ಅಂಬರೀಷ್‌ಗೆ ಟಿಕೆಟ್ ಸಿಗಲಿದೆ ಎಂದು ಹೇಳಲಾಗಿತ್ತು. ಯಾರೇ ರಾಜ್ಯಸಭೆಗೆ ಆಯ್ಕೆಯಾದರೂ 2028ರ ವಿಧಾನಸಭೆ ಚುನಾವಣೆಯಲ್ಲಿ ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ, ರಾಮನಗರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಲ್ಲಿ ಎನ್‌ಡಿಎ ಮೈತ್ರಿಕೂಟಕ್ಕೆ ಲಾಭವಾಗಲಿದೆ ಎಂದು ಲೆಕ್ಕಾಚಾರ ಹಾಕಲಾಗಿತ್ತು. ಭಾನುವಾರ ರಾತ್ರಿಯವರೆಗೂ ದೇವೇಗೌಡರು ಬಿಜೆಪಿ-ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿಯಲಿದ್ದಾರೆಂಬ ಮಾತು ಕೇಳಿಬಂದಿತ್ತು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರನ್ನು ರಾಜ್ಯಸಭೆಗೆ ಆಯ್ಕೆ ಮಾಡದಿರುವುದು ರಾಜಕೀಯ ವಲಯದಲ್ಲಿ ನಾನಾ ಚರ್ಚೆಗೆ ಎಡೆಮಾಡಿಕೊಟ್ಟಿದೆ. ಈ ಬೆಳವಣಿಗೆ ಮೈತ್ರಿಕೂಟದ ಒಡಕಿನ ಮುನ್ಸೂಚನೆ ಎನ್ನಲಾಗುತ್ತಿದೆ. ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ರಾಜ್ಯ ಬಿಜೆಪಿ ನಾಯಕರ ಜೊತೆಗೆ ಹೊಂದಾಣಿಕೆ ಮಾಡಿಕೊಳ್ಳುತ್ತಿಲ್ಲ. ಬದಲಾಗಿ ರಾಷ್ಟ್ರ ನಾಯಕರ ಜೊತೆಗೆ ಚರ್ಚೆ ನಡೆಸಿ ತೀರ್ಮಾನ ಕೈಗೊಳ್ಳುತ್ತಾರೆಂಬ ಅಭಿಪ್ರಾಯ ಇದೆ. ಜೆಡಿಎಸ್ ಪ್ರಮುಖರ ಈ ನಡೆ ಬಗ್ಗೆ, ರಾಜ್ಯದಲ್ಲಿ ಒಂದಿಷ್ಟು ಕಮಲ ನಾಯಕರಿಗೆ ಅಸಮಾಧಾನ ಇದ್ದೇ ಇದೆ. ಇನ್ನೊಂದೆಡೆ ರಾಜ್ಯಸಭೆ ಚುನಾವಣೆಗೆ ದೇವೇಗೌಡರಿಗೆ ಅವಕಾಶ ನೀಡದಿರುವುದು ಜೆಡಿಎಸ್ ವಲಯದಲ್ಲೂ ಆಂತರಿಕ ಬೇಗುದಿಗೆ ಎಡೆ ಮಾಡಿಕೊಟ್ಟಿದೆ.

**ಹೊರ ರಾಜ್ಯದಿಂದ ಸ್ಪರ್ಧೆಗೆ ನಿರಾಕಾರ**

ಅಸ್ಸಾಂ ಅಥವಾ ಮಹಾರಾಷ್ಟ್ರದಿಂದ ಸ್ಪರ್ಧೆ ಮಾಡುವಂತೆ ದೆಹಲಿ ಬಿಜೆಪಿ ನಾಯಕರು ದೇವೇಗೌಡರಿಗೆ ಮನವಿ ಮಾಡಿದ್ದರು. ಅದನ್ನು ಅಷ್ಟೇ ನಯವಾಗಿ ತಿರಸ್ಕರಿಸಿರುವ ಗೌಡರು ನನಗೆ ಕೊಡುವುದಿದ್ದರೆ



ಕರ್ನಾಟಕದಿಂದ ಅವಕಾಶ ಮಾಡಿಕೊಡಿ. ರಾಜಕೀಯ ಜೀವನದ ಸಂಧ್ಯಾ ಕಾಲದಲ್ಲಿ ಮಹಾರಾಷ್ಟ್ರ ಇಲ್ಲವೇ ಅಸ್ಸಾಂನಿಂದ ಸ್ಪರ್ಧೆ ಮಾಡಲಾರೆ. ಒಂದು ವೇಳೆ ಅಲ್ಲಿಂದ ಸ್ಪರ್ಧಿಸಿದರೆ ಕಾರ್ಯಕರ್ತರಿಗೆ ಬೇರೆಯದೇ ಸಂದೇಶ ಹೋಗುತ್ತದೆ. ಅದರ ಬದಲು ಟಿಕೆಟ್ ನೀಡದಿದ್ದರೂ ನನಗೆ ಬೇಸರವಿಲ್ಲವೆಂದು ಸ್ಪಷ್ಟಪಡಿಸಿದ್ದಾರೆ ಎನ್ನಲಾಗಿದೆ.

ಬಿಜೆಪಿಯ ಒಂದು ಟಿಕೆಟ್‌ಗಾಗಿ ಹಲವಾರು ಹೆಸರುಗಳು ಕೇಳಿ ಬರುತ್ತಿದ್ದವು. ಅದರಲ್ಲಿ ದೇವೇಗೌಡ, ಸದಾನಂದಗೌಡ, ಸುಮಲತಾ ಅಂಬರೀಷ್ ಮುಂತಾದವರ ಹೆಸರು ಮಂಚೂಣಿಯಲ್ಲಿ ಕೇಳಿಬರುತ್ತಿತ್ತು. ಅದಕ್ಕೆ ವ್ಯತಿರಿಕ್ತವಾಗಿ ಕುಮಾರಸ್ವಾಮಿ ಪ್ರತಿಕ್ರಿಯಿಸಿ, 18 ಶಾಸಕರನ್ನು ಹೊಂದಿರುವ ನಾವು ರಾಜ್ಯಸಭಾ ಸ್ಥಾನ ಬಯಸುವುದು ತಪ್ಪು ಎಂದು ಹೇಳಿದ್ದರು.

ಈ ಸಂಬಂಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಮಾತನಾಡಿ, ದೇವೇಗೌಡರು ಮೋದಿ ಅವರ ಕೈ ಬಲಪಡಿಸಿದ್ದಾರೆ. ಎನ್‌ಡಿಎಗೆ ಬೆಂಬಲ ನೀಡಿದ್ದಾರೆ. ಅವರ ಬಗ್ಗೆ ಪಕ್ಷಕ್ಕೆ ಅಪಾರ ಗೌರವ ಇದೆ. ರಾಜ್ಯಸಭೆಗೆ ಅವರನ್ನು ಕಳುಹಿಸುವ ಬಗ್ಗೆ ರಾಜ್ಯ ಮಟ್ಟದಲ್ಲಿ ಯಾವುದೇ ರೀತಿಯ ಚರ್ಚೆ ನಡೆದಿರಲಿಲ್ಲ, ಇತ್ತೀಚಿನ ರಾಜಕೀಯ ಸ್ಥಿತಿಗತಿ ನೋಡಿ ಸೂಕ್ತ ಅಭ್ಯರ್ಥಿಗೆ ಅವಕಾಶ ಮಾಡಿಕೊಟ್ಟಿದ್ದಾರೆ. ಪ್ರಾಮಾಣಿಕವಾಗಿ ದುಡಿದ ಪಕ್ಷದ ಕಾರ್ಯಕರ್ತರಿಗೆ ಅವಕಾಶ ನೀಡಿದ್ದಾರೆಂದರು.

ರಾಜ್ಯಸಭೆಗೆ ಸುಮಲತಾ ಅಂಬರೀಷ್ ಅವರ ಹೆಸರು ಪ್ರಸ್ತಾಪವಾಗಿತ್ತು. ಈ ಹಿಂದೆ ಮಂಡ್ಯದಿಂದ ಅವರು ಸ್ವತಂತ್ರ ಸ್ಪರ್ಧೆ ಮಾಡಿದ್ದಾಗ ಬಿಜೆಪಿ ಬೆಂಬಲ ನೀಡಿತ್ತು. ಒಳ್ಳೆಯ ಅಂತರದಿಂದ ಗೆಲುವು ಸಾಧಿಸಿದ್ದರು. ಕಳೆದ ಚುನಾವಣೆಯಲ್ಲಿ ಕುಮಾರಸ್ವಾಮಿ ಅವರಿಗೆ ಕ್ಷೇತ್ರ ಬಿಟ್ಟು ಕೊಟ್ಟಿದ್ದಾರೆ. ಸುಮಲತಾ ಅವರಿಗೆ ಮುಂದೆ ಸೂಕ್ತ ಸ್ಥಾನಮಾನ ಕೊಡಲಾಗುವುದೆಂದರು.

### ಕಾಂಗ್ರೆಸ್‌ಗೆ ಜೆಡಿಎಸ್ ತೀಕ್ಷ್ಣ ತಿರುಗೇಟು

ಮಣ್ಣಿನ ಮಗನಿಗೆ ಟಿಕೆಟ್ ನೀಡದಿರುವ ನಿರ್ಧಾರಕ್ಕೆ ಬರುವ ಮೂಲಕ ಕನ್ನಡಿಗರಿಗೆ ಬಿಜೆಪಿ ಅವಮಾನ ಮಾಡಿದೆ ಎಂದು ಕಾಂಗ್ರೆಸ್ ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಟೀಕಿಸಿದ್ದಾರೆ. ಅದಕ್ಕೆ ತೀಕ್ಷ್ಣ ತಿರುಗೇಟು ನೀಡಿರುವ ಜೆಡಿಎಸ್, ವಸೂಲಿವಾಲ ತಮ್ಮ ಪಕ್ಷದಲ್ಲಿ ನಡೆಯುತ್ತಿರುವ ಒಳಜಗಳ, ಒಳಸಂಚು ಹತ್ತಿಕ್ಕುವ ಬಗ್ಗೆ ಮೊದಲು ಸಮಾಲೋಚನೆ ನಡೆಸಿ ಎಂದಿದೆ.

## ಸ್ಪಷ್ಟತೆ ಸಿಗುವವರೆಗೆ ಅಧಿಕಾರ ಸ್ವೀಕರಿಸಲ್ಲ

• ಪ್ರಜೋದಯ ವರದಿ



**ಬೆಂಗಳೂರು:** ನಗರಾಭಿವೃದ್ಧಿ ಇಲಾಖೆಯಲ್ಲಿ ಬಿಡಿಎ ಮತ್ತು ಬಿಎಂಆರ್‌ಡಿಎ ಇಲಾಖೆಗಳನ್ನು ಸೇರಿಸದಿದ್ದರೆ ಅಧಿಕಾರ ಸ್ವೀಕಾರ ಮಾಡುವುದಿಲ್ಲವೆಂದು ಸಚಿವ ಕೃಷ್ಣಬೈರೇಗೌಡ ಪಟ್ಟು ಹಿಡಿದಿದ್ದಾರೆ ಎನ್ನಲಾಗಿದೆ.

ಬೆಂಗಳೂರು ಅಭಿವೃದ್ಧಿ ಇಲಾಖೆಗೆ ರಾಮಲಿಂಗಾ ರೆಡ್ಡಿ ಆಕಾಂಕ್ಷಿಯಾಗಿದ್ದರು. ಆದರೆ, ಕೃಷ್ಣಬೈರೇಗೌಡ ಅವರಿಗೆ ನೀಡಲಾಗಿತ್ತು. ಇದೀಗ ಖಾತೆಯಲ್ಲಿ ಬಿಡಿಎ ಮತ್ತು ಬಿಎಂಆರ್‌ಡಿಎ ಇಲ್ಲದೆ ಇರುವುದು ಕೃಷ್ಣಬೈರೇಗೌಡರ ಅಸಮಾಧಾನಕ್ಕೆ ಕಾರಣವಾಗಿದೆ. ಬೆಂಗಳೂರು ನಗರಾಭಿವೃದ್ಧಿ ಖಾತೆಯು ಬಿಡಿಎ ಮತ್ತು ಬಿಎಂಆರ್‌ಡಿಎ ಇಲ್ಲದೆ ಪರಿಪೂರ್ಣವಲ್ಲ ಎಂಬುದು ಅವರ ವಾದವಾಗಿದೆ. ಈ ಎರಡನ್ನೂ ಹೊರತುಪಡಿಸಿದರೆ ನನಗೆ ನೀಡಿದ ಖಾತೆ ಕೇವಲ ಕಾರ್ಪೊರೇಷನ್ ವಿಷಯಗಳಿಗೆ ಸೀಮಿತವಾಗುತ್ತದೆಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬಳಿ ಅಸಮಾಧಾನ ವ್ಯಕ್ತಪಡಿಸಿದ್ದಾರೆಂದು ತಿಳಿದುಬಂದಿದೆ.

ಹೈಕಮಾಂಡ್ ಈ ಬಗ್ಗೆ ಸ್ಪಷ್ಟನೆ ನೀಡಬೇಕೆಂದಿರುವ ಅವರು, ಒಂದು ವೇಳೆ ಇದು ಸಾಧ್ಯವಾಗದಿದ್ದರೆ ಗೊಂದಲ ಬಗೆಹರಿಯುವವರೆಗೂ ಇಲಾಖೆಯ ಜವಾಬ್ದಾರಿಯನ್ನು ವಹಿಸುವುದಿಲ್ಲ ವೆಂದು ತಿಳಿಸಿದ್ದಾರೆ.

**ನೂತನ ಸಚಿವರಿಗೆ ಕೊಠಡಿ ಹಂಚಿಕೆ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ 13 ಸಚಿವರಿಗೆ ಖಾತೆ ಬಳಿಕ ಕೊಠಡಿಗಳನ್ನು ಹಂಚಿಕೆ ಮಾಡಲಾಗಿದೆ. ವಿಧಾನಸೌಧ ಮತ್ತು ವಿಕಾಸ ಸೌಧದಲ್ಲಿ ಕೊಠಡಿ ಹಂಚಿಕೆ ಮಾಡಿ ಸೋಮವಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಆದೇಶ ಹೊರಡಿಸಿದೆ.

ಖಾತೆ ಹಂಚಿಕೆ ವಿಚಾರದಲ್ಲಿ ಮುನಿಸಿಕೊಂಡು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಜಲಸಂಪನ್ಮೂಲ ಸಚಿವ ರಾಮಲಿಂಗಾ ರೆಡ್ಡಿ ಅವರಿಗೆ ನಾಲ್ಕು ಕೊಠಡಿಗಳನ್ನು ನೀಡಲಾಗಿದೆ. ವಿಧಾನಸೌಧದಲ್ಲಿ 335, 336, 337, 337 ಕೊಠಡಿಗಳ ಹಂಚಿಕೆ ಮಾಡಿ ಅವರನ್ನು ಸಮಾಧಾನಪಡಿಸಲಾಗಿದೆ.

## ವಿದ್ಯುತ್ ನಿಗಮ ಖಾಸಗಿ ಪಾಲು ವಿರೋಧಿಸಿ ಪ್ರತಿಭಟನೆ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರಾಜ್ಯದ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಮಾಡಲು ಟಾಟಾ ಪವರ್ ಕಂಪನಿಯು ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ಪರವಾನಗಿ ಕೋರಿ ಅರ್ಜಿ ಸಲ್ಲಿಸಿರುವುದನ್ನು ಖಂಡಿಸಿ ನೌಕರರ ಒಕ್ಕೂಟವು ಸೋಮವಾರ ಸೆಸ್ಕಾಂ ವಿಭಾಗೀಯ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕೆಪಿಟಿಸಿಎಲ್ 659 ನೌಕರರ ಸಂಘದ ಕೇಂದ್ರ ಸಮಿತಿ ಸದಸ್ಯ ಹರೀಶ್ ಅವರು ಮಾತನಾಡಿ, ವಿದ್ಯುತ್ ಇಲಾಖೆಯನ್ನು ಖಾಸಗೀಕರಣ ಮಾಡುತ್ತಿರುವುದರಿಂದ ಮುಂದಿನ ದಿನದಲ್ಲಿ ಪ್ರತಿಯೊಬ್ಬರಿಗೂ ತೊಂದರೆಯಾಗಲಿದೆ. ಇಂಧನ ಇಲಾಖೆ ಸಾರ್ವಜನಿಕರ ಆಸ್ತಿ. ಅದನ್ನು ಖಾಸಗಿಕರಣ ಮಾಡುತ್ತಿರುವುದು ಎಷ್ಟರ ಮಟ್ಟಿಗೆ ಸರಿ. ಒಕ್ಕೂಟವು ರಾಜ್ಯದ ಎಲ್ಲಾ ವರ್ಗದ ಗ್ರಾಹಕರ ಮತ್ತು ಎಸ್ಕಾಂಗಳ ನೌಕರರ ಹಿತ ಕಾಯಲು ಬದ್ಧವಾಗಿದೆ. ರಾಜ್ಯದಲ್ಲಿ ಅದ್ಭುತ ತಾಂತ್ರಿಕ ಸಾಮರ್ಥ್ಯ, ಮೂಲ ಸೌಕರ್ಯ ಮತ್ತು ಸುಗಮ ಆಡಳಿತ ನಿರ್ವಹಣೆ ಇರುವಾಗ ರಾಜ್ಯದ ವಿದ್ಯುತ್ ವಿತರಣಾ ಜಾಲವನ್ನು ಹೊರ ರಾಜ್ಯದ ಖಾಸಗಿ ಸಂಸ್ಥೆಗೆ ಹಸ್ತಾಂತರಿಸಲು ಬಿಡುವುದಿಲ್ಲ. ಕೆಇಆರ್‌ಸಿ, ವಿದ್ಯುತ್ ವಿತರಣಾ ಜಾಲದ ಖಾಸಗೀಕರಣ ನಿರ್ಧಾರವನ್ನು ಕೈಬಿಟ್ಟು ಟಾಟಾ ಪವರ್ ಸಂಸ್ಥೆಯ ಅರ್ಜಿಯನ್ನು ತಿರಸ್ಕರಿಸಬೇಕು. ಯಾವುದೇ ಕಾರಣಕ್ಕೂ ವಿದ್ಯುತ್ ಕ್ಷೇತ್ರ ಕಾರ್ಪೊರೇಟ್ ಕಂಪನಿಗಳ ಪಾಲಾಗಬಾರದು. ಕೆಪಿಟಿಸಿಎಲ್ ಹಾಗು ಐದು ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಗೆ ಟಾಟಾ ಪವರ್ ಕಂಪನಿ ಪರವಾನಗಿ ಪಡೆಯುತ್ತಿರುವುದು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ವ್ಯವಸ್ಥಿತ ಸಂಚು. ಹೀಗಾಗಿ ಪರವಾನಗಿ ನೀಡುವುದಕ್ಕೆ ಆಕ್ಷೇಪಣೆ ಸಲ್ಲಿಸಬೇಕೆಂದರು.

ಸೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ಕೃಷ್ಣ ಅವರು ಮಾತನಾಡಿ, ಸರ್ಕಾರ ರಾಜ್ಯದ ವಿದ್ಯುತ್ ವಿತರಣಾ ವಲಯವನ್ನು ಕಾರ್ಪೊರೇಟ್ ಕಂಪನಿಗಳಿಗೆ ಧಾರೆ ಎರೆಯಲು ಹೊರಟಿದೆ. ರಾಜ್ಯದ ಜನರ ಆಸ್ತಿಯಾಗಿರುವ ವಿದ್ಯುತ್ ವಲಯವನ್ನು ಖಾಸಗೀಕರಣಗೊಳಿಸುವುದು ಅಪಾಯಕಾರಿ ಎಂದರು.

ಕೆಇಆರ್‌ಸಿಗೆ ಆಕ್ಷೇಪಣೆ ಸಲ್ಲಿಸಲು 2026ರ ಜೂ.23ರ ವರೆಗೆ ಮಾತ್ರ ಸಮಯ ನೀಡಲಾಗಿದೆ. ಹೀಗಾಗಿ ನೌಕರರು ಹಾಗು ಸಾರ್ವಜನಿಕರು, ರೈತರು ಪ್ರಸ್ತಾವನೆ ವಿರುದ್ಧ ಆಕ್ಷೇಪಣಾ ಅರ್ಜಿ ಸಲ್ಲಿಸಬೇಕೆಂದು ಆಗ್ರಹಿಸಿದರು. ಎಲ್‌ಟಿ ರೇಟಿಂಗ್ ಸಹಾಯಕ ಕಾರ್ಯಪಾಲಕ ಅಭಿಯಂತರ ಸತೀಶ್, ಕೆಪಿಟಿಸಿಎಲ್ 659 ನೌಕರರ ಸಂಘದ ಅಧ್ಯಕ್ಷ ಅಶೋಕ್, ಕಾರ್ಯದರ್ಶಿ ಮಂಜುನಾಥ್, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಮಲ್ಲಪ್ಪಚಾರ್ ಮತ್ತಿತರರಿದ್ದರು.

# ಬಿಹಾರ ಮಕ್ಕಳ ಕನ್ನಡ ಪ್ರೇಮಕ್ಕೆ ಜಿ.ಪಂ. ಸಿಇಒ ಸಂತಸ

## ಪಿರುಮನಹಳ್ಳಿ ಕಿರಿಯ ಪ್ರಾಥಮಿಕ ಶಾಲೆಗೆ ಭೇಟಿ | ಮೂಲಸೌಲಭ್ಯ ಕಲ್ಪಿಸುವ ಭರವಸೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಪಿರುಮನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಭೇಟಿ ನೀಡಿ ವ್ಯಾಸಂಗ ಮಾಡುತ್ತಿರುವ ಬಿಹಾರ ಮೂಲದ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಏಪ್ರಿಲ್ 23ರಂದು ಪ್ರಜೋದಯ ಪತ್ರಿಕೆಯಲ್ಲಿ ಪ್ರಕಟವಾಗಿದ್ದ ಬಿಹಾರದ ಮುಗ್ಧ ಮಕ್ಕಳಿಗೆ ಕನ್ನಡವೇ ಅಚ್ಚು-ಮೆಚ್ಚು ವಿಶೇಷ ವರದಿಯನ್ನು ಗಮನಿಸಿದ ಸಿಇಒ ಸೋಮವಾರ ಭೇಟಿ ನೀಡಿದ್ದು, ಶಾಲೆಗೆ ಮೂಲ ಸೌಕರ್ಯಗಳು ದೊರೆಯುವ ಆಶಾಭಾವ ಮೂಡಿಸಿದೆ.

ಮಧ್ಯಾಹ್ನ ಶಾಲೆಗೆ ಭೇಟಿ ನೀಡಿದ ಅವರು ಬಿಹಾರದ ಮಕ್ಕಳಿಗೆ ಕನ್ನಡ ಕಲಿಸುತ್ತಿರುವ ಶಿಕ್ಷಕಿ ಎಸ್.ಪಿ. ಪ್ರಮೀಳಾ ಅವರ ಕಾಳಜಿಯನ್ನು ಕೊಂಡಾಡಿದರು. ಶಾಲೆಗೆ ಅಡುಗೆ ಸಿಬ್ಬಂದಿ ನಿಯೋಜನೆ, ಛಾವಣಿ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗು ಶಿಕ್ಷಣ ಇಲಾಖೆ




ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ಶಿಕ್ಷಕಿಯ ಕಾರ್ಯಕ್ಕೆ ಸಿಇಒ ಮೆಚ್ಚುಗೆ**

ನಗರದಲ್ಲಿ ಕಳೆದ ಹತ್ತು ವರ್ಷಗಳಿಂದಲೂ ಚಿಂದಿ ಆಯುವ, ಕುಂಚಿ ಕೆಲಸ ಮಾಡಿಕೊಂಡು ಬದುಕುತ್ತಿರುವ ಪೋಷಕರು ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಹಿಂದೇಟು ಹಾಕುತ್ತಿದ್ದರು. ರಸ್ತೆ ಬದಿಯಲ್ಲಿ ಆಟವಾಡಿಕೊಂಡಿದ್ದ ಮಕ್ಕಳನ್ನು ಕಂಡ ಪಿರುಮನಹಳ್ಳಿ ಶಾಲೆಯ ಶಿಕ್ಷಕಿ ಪ್ರಮೀಳಾ ಅವರು ಪೋಷಕರ ಮನವೊಲಿಸಿ ತಮ್ಮ ಶಾಲೆಗೆ ದಾಖಲು ಮಾಡಿಕೊಂಡಿದ್ದರು. ನಾಲ್ಕು ವರ್ಷಗಳ ಹಿಂದೆ ಇಬ್ಬರು ಮಕ್ಕಳನ್ನು ಕರೆದುಕೊಂಡು ಹೋಗುತ್ತಿದ್ದ ಅವರು ಪ್ರಸ್ತುತ 8 ಮಕ್ಕಳಿಗೆ ನೆರವಾಗಿದ್ದಾರೆ. ನಿತ್ಯ ತಾವು ಹೋಗುವ ಆಟೋದಲ್ಲೇ ಬಿಹಾರದ ಮಕ್ಕಳನ್ನು ಕರೆದೊಯ್ಯುತ್ತಾರೆ. ತಿಂಗಳಿಗೆ 8 ಸಾವಿರ ರೂ. ಬಾಡಿಗೆಯನ್ನು ಶಿಕ್ಷಕಿಯೇ ಭರಿಸುತ್ತಾರೆ. ಭಾಷಾ ಸಮಸ್ಯೆಯಿಂದ ಆರಂಭದಲ್ಲಿ ಮಕ್ಕಳೊಂದಿಗೆ ಸಂವಹನ ಕಷ್ಟವಾದರೂ ವಿದ್ಯಾರ್ಥಿಗಳಿಗೆ ಶಿಕ್ಷಣ ಕೊಡಿಸಬೇಕೆಂದು ಶಿಕ್ಷಕಿ ಪ್ರಮೀಳಾ ಅವರು ಸಾಕಷ್ಟು ಪರಿಶ್ರಮಪಟ್ಟಿದ್ದಾರೆ. ಈಗ ಎಂಟು ವಿದ್ಯಾರ್ಥಿಗಳು ಸ್ಪಷ್ಟವಾಗಿ ಕನ್ನಡ ಮಾತನಾಡುವುದಲ್ಲದೇ ಬರೆಯುತ್ತಾರೆ. ಶಿಕ್ಷಕಿಯ ಈ ಮಾನವೀಯತೆಯನ್ನು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಣ್ಣಿಸಿದ್ದಾರೆ.

**ಆಧಾರ್ ಕಾರ್ಡ್ ಸಮಸ್ಯೆಗೆ ಪರಿಹಾರ**

1 ರಿಂದ 5ನೇ ತರಗತಿವರೆಗೆ ಪಿರುಮನಹಳ್ಳಿ ಶಾಲೆಯಲ್ಲಿ ಓದಿರುವ ಮಕ್ಕಳಿಗೆ ಮುಂದಿನ ಶಿಕ್ಷಣದ್ದೇ ಚಿಂತೆಯಾಗಿದೆ. ಆಧಾರ್ ಕಾರ್ಡ್ ಇಲ್ಲದೆ ದಾಖಲಾತಿ ಮಾಡಿಕೊಳ್ಳುವುದಿಲ್ಲವೆಂದು ಬೇರೆ ಸರ್ಕಾರಿ ಶಾಲೆಯ ಶಿಕ್ಷಕರು ಈಗಾಗಲೇ ಹೇಳಿರುವುದರಿಂದ ಮಕ್ಕಳ ಭವಿಷ್ಯ ಅತಂತ್ರವಾಗುವ ಆತಂಕ ಕಾಡುತ್ತಿದೆ. ಪೋಷಕರು ಅನಕ್ಷರಸ್ಥರಾಗಿರುವುದರಿಂದ ತಮ್ಮ ಮಕ್ಕಳ ಜನನ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮಾಡಿಸಿಲ್ಲ. ಈ ದಾಖಲೆ ಇಲ್ಲದೆ ವ್ಯಾಸಂಗ ಮಾಡಬಹುದಾದರೂ ಶಿಕ್ಷಕರು ಜವಾಬ್ದಾರಿ ವಹಿಸಿಕೊಳ್ಳಲು ಸಾಧ್ಯವಿಲ್ಲ. ಮಕ್ಕಳ ಹೆಸರಿನಲ್ಲಿ ಆಧಾರ್ ಕಾರ್ಡ್ ಪಡೆಯಬೇಕೆಂದರೆ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಬೇಕಿದೆ. ಆ ಪ್ರಕ್ರಿಯೆಗೆ ಪೋಷಕರು ಸುತಾರಾಂ ತಯಾರಿಲ್ಲ. ಹೀಗಾಗಿ ಮಕ್ಕಳ ಶಿಕ್ಷಣ ಡೋಲಾಯಮಾನವಾಗುತ್ತದೆಂಬ ಆತಂಕ ಕಾಡುತ್ತಿದೆ. ಈ ಸಮಸ್ಯೆಯನ್ನು ಆಲಿಸಿರುವ ಶುಭಂ ಶುಕ್ಲಾ ಅವರು, ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದು, ಆಧಾರ್ ಕಾರ್ಡ್ ಮಾಡಿಸಿಕೊಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಎಲ್ಲವೂ ಅಂದುಕೊಂಡಂತೆ ಆದರೆ ಶೀಘ್ರದಲ್ಲೇ ಮಕ್ಕಳು ಆಧಾರ್ ಪಡೆಯಲಿದ್ದಾರೆ.

**ಗ್ರಾಮದಲ್ಲಿ ಸಂಚಲನ ಸೃಷ್ಟಿಸಿದ ಭೇಟಿ**

ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರ ದಿಢೀರ್ ಭೇಟಿ ಪಿರುಮನಹಳ್ಳಿಯಲ್ಲಿ ಸಂಚಲನ ಸೃಷ್ಟಿಸಿದೆ. ಶಿಕ್ಷಣ ಇಲಾಖೆ ಸಂಪನ್ಮೂಲ ಅಧಿಕಾರಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ದೂರವಾಣಿ ಮೂಲಕ ಸಂಪರ್ಕಿಸಿದ ಶುಭಂ ಶುಕ್ಲಾ ಮಕ್ಕಳಿಗೆ ತೊಂದರೆಯಾಗದಂತೆ ಕ್ರಮ ವಹಿಸುವಂತೆ ನಿರ್ದೇಶನ ನೀಡಿದ್ದಾರೆ.

## ಅಪಘಾತ : ಮಹಿಳೆ ಸಾವು

• ಪ್ರಜೋದಯ ವರದಿ

**ಕೊಣನೂರು :** ಹಂಪ್ಸ್ ದಾಟಿಸಲಾಗದ ಪರಿಣಾಮ ಬೈಕ್ ಹಿಂಬದಿ ಕುಳಿತ್ತಿದ್ದ ಮಹಿಳೆ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಕೊಣನೂರು ಹೋಬಳಿ ಉಳ್ಳೇನಹಳ್ಳಿಯಲ್ಲಿ ನಡೆದಿದೆ.

ಕುಶಾಲನಗರ ತಾಲ್ಲೂಕು ಬಾಣಾವರ ಗ್ರಾಮದ ರಾಜೇಶ್ವರಿ (30) ಮೃತರು. ತಮ್ಮ ಮಗನೊಂದಿಗೆ ಕೊಣನೂರಿಗೆ ಹೋಗುತ್ತಿದ್ದಾಗ ರಸ್ತೆಗೆ ಅಡ್ಡಲಾಗಿ ಹಾಕಿದ್ದ ಹಂಪ್ಸ್ ಗೊತ್ತಾಗದೆ ಸವಾರ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದಾನೆ. ತಲೆಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಮಹಿಳೆ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬೈಕ್ ಸವಾರನಿಗೂ ಗಾಯಗಳಾಗಿದ್ದು, ಹಿಮ್ಸ್‌ಗೆ ದಾಖಲಿಸಲಾಗಿದೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಸ್ಥಳೀಯರ ಪ್ರತಿಭಟನೆ**

ರಸ್ತೆಯಲ್ಲಿ ಅವೈಜ್ಞಾನಿಕ ಹಂಪ್ಸ್ ಅಳವಡಿಸಿರುವುದೇ ಅಪಘಾತಕ್ಕೆ ಕಾರಣವೆಂದು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಅವೈಜ್ಞಾನಿಕವಾಗಿ ರಸ್ತೆ ಉಬ್ಬು ನಿರ್ಮಿಸಲಾಗಿದೆ. ಇಲ್ಲಿ ಸೂಚನಾ ಫಲಕಗಳನ್ನು ಅಳವಡಿಸಿಲ್ಲ. ರಾತ್ರಿ ಹೊತ್ತು ಸಂಚರಿಸುವವರಿಗೆ ರಸ್ತೆಯಲ್ಲಿ ಹಂಪ್ಸ್ ಇರುವುದು ಗೊತ್ತಾಗುವುದಿಲ್ಲ. ಭಾರೀ ಗಾತ್ರದ ಹಂಪ್ಸ್ ಹಾಕಿರುವುದರಿಂದ ವಾಹನ ಸವಾರರು ನಿಯಂತ್ರಣ ತಪ್ಪಿ ಬೀಳುವಂತಾಗಿದೆ. ಈ ಸ್ಥಳದಲ್ಲಿ ಅಪಘಾತಗಳು ಮರುಕಳಿಸುತ್ತಿವೆ. ಸಮಸ್ಯೆಗೆ ಪರಿಹಾರ ಕಲ್ಪಿಸಬೇಕೆಂದು ಒತ್ತಾಯಿಸಿದರು.

## ಶಾಲಾ ಕೊಠಡಿ ದುರಸ್ತಿಗೆ ವಿಶೇಷ ಅನುದಾನಕ್ಕೆ ಆಗ್ರಹ

• ಪ್ರಜೋದಯ ವರದಿ

**ಸಕಲೇಶಪುರ:** ಮಳೆಗಾಲ ಆರಂಭವಾಗುತ್ತಿರುವ ಹಿನ್ನಲೆ ಮಲೆನಾಡು ಭಾಗದ ಸರ್ಕಾರಿ ಶಾಲೆಗಳ ಶಿಥಿಲಗೊಂಡ ಕಟ್ಟಡಗಳ ದುರಸ್ತಿ ಹಾಗು ಹೊಸ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರ ತುರ್ತು ಅನುದಾನ ಬಿಡುಗಡೆ ಮಾಡಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಒತ್ತಾಯಿಸಿದರು.

ತಾಲ್ಲೂಕಿನ ಹೆಬ್ಬನಹಳ್ಳಿ ಗ್ರಾಮದಲ್ಲಿ ಸೋಮವಾರ ನೂತನ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಶಾಲೆಗೆ ಹೊಸ ಕಟ್ಟಡ ನಿರ್ಮಿಸಬೇಕೆಂಬ ನಿರ್ಧಾರವನ್ನು



ಕೈಗೊಂಡಿದ್ದು, 14.50 ಲ. ರೂ. ಅನುದಾನ ಮಂಜೂರಾಗಿದೆ. ಇಲ್ಲಿನ ಹಳೆಯ ಶಾಲಾ ಕಟ್ಟಡ ಶಿಥಿಲಾವಸ್ಥೆಯಲ್ಲಿರುವುದರಿಂದ ಹೊಸ ಕಟ್ಟಡದ ಅವಶ್ಯಕತೆ ಹೆಚ್ಚಾಗಿದೆ. ವಿದ್ಯಾರ್ಥಿಗಳಿಗೆ ಸುರಕ್ಷಿತ ಹಾಗು ಗುಣಮಟ್ಟದ ಶಿಕ್ಷಣದ ವಾತಾವರಣ ಕಲ್ಪಿಸುವ ಉದ್ದೇಶದಿಂದ ಅಭಿವೃದ್ಧಿ ಕಾರ್ಯ ಆರಂಭಿಸಲಾಗಿದೆ ಎಂದರು.

ಪ್ರಸ್ತುತ ಶಾಲೆಗೆ 9 ಕೊಠಡಿಗಳ ಅಗತ್ಯವಿದ್ದು, ಹಂತ-ಹಂತವಾಗಿ ಹೆಚ್ಚುವರಿ ಕೊಠಡಿ

» ನಾಲ್ಕನೇ ಪುಟದಲ್ಲಿ

## ಮಹಿಳಾ ಸರ್ಕಾರಿ ಕಾಲೇಜು ರಸ್ತೆಗೆ ಕಬ್ಬಿಣದ ಸರಳು

• ಪ್ರಜೋದಯ ವರದಿ

**ಹಾಸನ:** ನಗರದ ಕೆ.ಆರ್.ಪುರಂ ಗಂಧದಕೋಠಿ ಉದ್ಯಾನವನ ಹಾಗು ಮಹಿಳಾ ಸರ್ಕಾರಿ ಕಾಲೇಜು ಆವರಣದಲ್ಲಿ ನಡೆಯುತ್ತಿರುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕುವ ಹಿನ್ನಲೆಯಲ್ಲಿ ಮುಖ್ಯ ರಸ್ತೆಗೆ ಕಬ್ಬಿಣದ ಸರಳು ಅಳವಡಿಸಲಾಗಿದೆ.

ವಿದ್ಯಾರ್ಥಿನಿಯರ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದ್ದರು. ಆ ಹಿನ್ನಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಗಂಗಣ್ಣ ಅವರು ಘಲ್ಗುಣಿ ಮುಂಭಾಗದ ಕಾಲೇಜು ರಸ್ತೆಗೆ ತಾತ್ಕಾಲಿಕವಾಗಿ ಕಬ್ಬಿಣದ ಸರಳು ಅಳವಡಿಸಿದ್ದಾರೆ. ಕಾಲೇಜಿನ ಒಳಗಡೆ ಬೈಕ್ ಸೇರಿ ಯಾವ ವಾಹನ ಓಡಾಡುವುದನ್ನು ತಡೆಗಟ್ಟಿದಂತಾಗಿದೆ.

**ಭದ್ರತಾ ಸಿಬ್ಬಂದಿ ನೇಮಿಸಿ**

ಕಾಲೇಜು ಆವರಣದಲ್ಲಿ ನಡೆಯುತ್ತಿರುವ ಅನೈತಿಕ ಚಟುವಟಿಕೆಗೆ ಸಂಪೂರ್ಣ ಕಡಿವಾಣ ಹಾಕಲು ಎರಡೂ ಗೇಟ್‌ನಲ್ಲಿ ಭದ್ರತಾ ಸಿಬ್ಬಂದಿ ನೇಮಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಒಂದೇ ಕಡೆ ಮಹಿಳಾ ವಿಭಜಿತ ಕಾಲೇಜು ಸೇರಿ ಮೂರು

» ನಾಲ್ಕನೇ ಪುಟದಲ್ಲಿ

## ಅಭಿನಂದನಾ ಕಾರ್ಯಕ್ರಮ ಮುಂದೂಡಿಕೆ

• ಪ್ರಜೋದಯ ವರದಿ

**ಹಾಸನ:** ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಆಯುಕ್ತ ವೈ.ಎಸ್.ವೀರಭದ್ರಪ್ಪ ಅವರಿಗೆ ಜೂನ್ 24ರಂದು ಹಿರಿಯ ನಾಗರಿಕ ವೇದಿಕೆ ವತಿಯಿಂದ ಆಯೋಜಿಸಿದ್ದ ಅಭಿ ನಂದನಾ ಸಮಾರಂಭವನ್ನು ಜುಲೈ 12ಕ್ಕೆ ಮುಂದೂಡಲಾಗಿದೆ ಎಂದು ಅಭಿನಂದನಾ ಕಾರ್ಯ ಕ್ರಮದ ಸಂಚಾಲಕ ರವಿ ನಾಕಲಗೂಡು ಅವರು ತಿಳಿಸಿದ್ದಾರೆ.

ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮವನ್ನು ಕಾರಣಾಂತರಗಳಿಂದ ಮುಂದೂ ಡಲಾಗಿದ್ದು, ಜುಲೈ 12ರಂದು ನಿಗದಿಪಡಿಸಲಾಗಿದೆ. ಸುತ್ತೂರು ಮಠದ ಶಿವರಾತ್ರಿದೇಶಿ ಕೇಂದ್ರ ಸ್ವಾಮೀಜಿ ಹಾಗು ಜಿಲ್ಲೆಯ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ವೀರಭದ್ರಪ್ಪ ಅವರು ಕಳೆದ 50 ವರ್ಷಗಳಿಂದ ವಿವಿಧ ಸಂಘ ಸಂಸ್ಥೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಸಮಾಜದ ಸುಧಾರಣೆಗಾಗಿ ಹಲವು ವಿನೂತನ ಕಾರ್ಯಕ್ರಮ ಆಯೋಜನೆ ಮಾಡುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಅವರ ಅಭಿನಂದನಾ ಗ್ರಂಥ ಬಿಡುಗಡೆ ಹಾಗು ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದೆಂದು ತಿಳಿಸಿದ್ದಾರೆ.

## ಜಿಲ್ಲಾ ನ್ಯಾಯಾಲಯ ಎದುರು ಘಟನೆ | ಆರೋಪಿಗಳ ಪತ್ತೆಗೆ ಕ್ರಮ

# ಬೆಂಗಳೂರಿನ ರೌಡಿಶೀಟರ್ ಹಾಸನದಲ್ಲಿ ಹತ್ಯೆ

• ಪ್ರಜೋದಯ ವರದಿ

**ಹಾಸನ:** ಬೆಂಗಳೂರಿನ ರೌಡಿಶೀಟರ್‌ನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದಿರುವ ಘಟನೆ ನಗರದ ಜಿಲ್ಲಾ ನ್ಯಾಯಾಲಯ ಮುಂಭಾಗ ತಡರಾತ್ರಿ ನಡೆದಿದೆ.

ಬೆಂಗಳೂರಿನ ಅಂಜನಪುರ-ಅವಲಹಳ್ಳಿ ನಿವಾಸಿ ಮಂಜೇಶ್ (43) ಮೃತ. ಮೂಲತಃ ತಾಲ್ಲೂಕಿನ ದೊಡ್ಡಪುರ ಗ್ರಾಮದ ಈತ ಬಾಲ್ಯದಿಂದಲೂ ಬೆಂಗ ಳೂರಿನಲ್ಲೇ ನೆಲೆಸಿದ್ದ. ಭಾನುವಾರ ರಾತ್ರಿ 2 ಗಂಟೆ ಸಮಯದಲ್ಲಿ ಕೊಲೆ ನಡೆದಿದ್ದು, ಈತ ಹಾಸನಕ್ಕೆ ಏಕೆ ಬಂದಿದ್ದ ಎಂಬುದು ನಿಗೂಢವಾಗಿದೆ.

**ಮಂಜೇಶ್ ವಿರುದ್ಧ 7 ಪ್ರಕರಣ**

ಹತ್ಯೆ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರು ಮಾತನಾಡಿ, ಮೃತ ಮಂಜೇಶ್ ವಿರುದ್ಧ ಬೆಂಗಳೂರು ದಕ್ಷಿಣ ಪಶ್ಚಿಮ ವಲಯ ಠಾಣೆಯಲ್ಲಿ ರೌಡಿಶೀಟರ್ ಖಾತೆ ತೆರೆ ಯಲಾಗಿತ್ತು. 2012,



2013, 2020 ರಲ್ಲಿ ಮಂಜೇಶ್ ವಿರುದ್ಧ ಕೊಲೆ ಪ್ರಕರಣ ದಾಖಲಾಗಿತ್ತು. ಇಷ್ಟು ಮಾತ್ರವಲ್ಲದೆ ಕೊಲೆಯತ್ನ, ಜಾತಿ ನಿಂದನೆ ಸೇರಿ 7 ಪ್ರಕರಣದ ಆರೋಪಿಯಾಗಿದ್ದ. ಹೀಗಾಗಿ 2026ರ ಮೇ 13ರಂದು ಈತ ನನ್ನು ಚಿಕ್ಕಮಗಳೂರು ಜಿಲ್ಲೆಗೆ ಗಡಿಪಾರು ಮಾಡಿ ಬೆಂಗಳೂರು ಪೊಲೀಸರು ಆದೇಶಿಸಿದ್ದರೆಂದು ಮಾಹಿತಿ ನೀಡಿದರು.

ಜಿಲ್ಲಾ ನ್ಯಾಯಾಲಯ ಮುಂಭಾಗ ಮಚ್ಚು, ಲಾಂಗ್‌ನಿಂದ ಮನಸೋಇಚ್ಛೆ ಹಲ್ಲೆ ನಡೆಸಿದ್ದಾರೆ. ತಲೆ ಎರಡು ಹೋಳಾಗಿದ್ದರೆ ಬಲಗೈ ತುಂಡಾಗಿ ಪಕ್ಕದಲ್ಲೇ ಬಿದ್ದಿದೆ. ಎಡಗೈನ ಬೆರಳು ಕತ್ತರಿಸಿದೆ. ಹೊಟ್ಟೆಗೂ ಗಂಭೀರ ಪೆಟ್ಟಾಗಿದೆ. ಹಳೆಯ ದ್ವೇಷದಿಂದ ಪರಿಚಯಸ್ಥರೇ ಕೃತ್ಯ ಎಸಗಿ ದ್ದಾರೆ. ಕೊಲೆ ಪ್ರಕರಣದಲ್ಲಿ ಹಾಸನದವರು ಯಾರೂ ಇಲ್ಲ. ತನಿಖೆ ನಡೆಯುತ್ತಿದ್ದು ಶೀಘ್ರವೇ ಆರೋಪಿಗಳನ್ನು ಬಂಧಿಸಲಾಗುವುದೆಂದರು.



> “ ಮಂಜೇಶ್ ಕೊಲೆ ಪ್ರಕರಣ ಸಂಬಂಧ ಎಲ್ಲಾ ಆಯಾಮದಿಂದಲೂ ತನಿಖೆ ನಡೆಸಲಾಗುತ್ತಿದೆ. ಪೂರಕ ಸಾಕ್ಷ್ಯಾಧಾರಗಳನ್ನು ಕಲೆ ಹಾಕಲಾಗುತ್ತಿದೆ. ಆದಷ್ಟು ಬೇಗ ಆರೋಪಿಗಳ ಬಂಧಿಸಲಾಗುವುದು.
> -ಶುಭನ್ವಿತಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

**ಘಟನೆ ಗೊತ್ತಾಗಿದ್ದು ಹೇಗೆ**

ಮಧ್ಯರಾತ್ರಿ 3 ಗಂಟೆ ಸಮಯದಲ್ಲಿ 112 ಸಹಾಯವಾಣಿಗೆ ಸಾರ್ವಜನಿಕರು ಅಪರಿಚಿತ ಶವ ಪತ್ತೆಯಾಗಿರುವ ಬಗ್ಗೆ ಮಾಹಿತಿ ನೀಡಿದಾಗ ಗಸ್ತು ಸಿಬ್ಬಂದಿಗೆ ಸ್ಥಳಕ್ಕೆ ದೌಡಾಯಿಸಿದ್ದಾರೆ. ರಕ್ತಸಿಕ್ತ ಶವದ ಪಕ್ಕದಲ್ಲೇ ಪರ್ಸ್ ಕಂಡಿದ್ದು ಅದನ್ನು ಪರಿಶೀಲಿಸಿದಾಗ ಆಧಾರ್ ಹಾಗು ಪಾನ್ ಕಾರ್ಡ್‌ಗಳು ಸಿಕ್ಕಿವೆ. ಜೊತೆಗೆ ಜೈಲು ಶಿಕ್ಷೆಗೆ ಒಳಗಾದವರಿಗೆ ನೀಡುವ ಯುಟಿಪಿ ನಂಬರ್ ಕಾರ್ಡ್ ಸಹ ಇದ್ದಿದ್ದರಿಂದ ಪೊಲೀಸರಿಗೆ ಮಂಜೇಶ್‌ನ ಪೂರ್ವಾಪರ ತಕ್ಷಣಕ್ಕೆ ತಿಳಿದುಬಂದಿದೆ.

**ಬೆಚ್ಚಿ ಬೀಳಿಸಿದ ಘಟನೆ**

ಸಾರ್ವಜನಿಕ ಪ್ರದೇಶದಲ್ಲೇ ಭೀಕರವಾಗಿ ಕೊಲೆಯಾಗಿ ಹೋಗಿರುವುದು ಸ್ಥಳೀಯರನ್ನು ಬೆಚ್ಚಿ ಬೀಳಿಸಿದೆ. ಸುದ್ದಿ ತಿಳಿದ ಕೂಡಲೇ ನಗರ ಠಾಣೆ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿದರು. ಜೊತೆಗೆ ಸ್ಥಳೀಯರಿಂದ ಮಾಹಿತಿ ಪಡೆದದರು. ಹಿಮ್ಸ್‌ನಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಮೃತದೇಹವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

### ಹಾಸನಕ್ಕೆ ಬಂದಿದ್ದರ ಕಾರಣ ನಿಗೂಢ

ಬೆಂಗಳೂರಿನ ತಳಗುಪ್ಪ ಠಾಣೆಯಲ್ಲಿ ರೌಡಿ ಶೀಟರ್ ಆಗಿದ್ದ ಮಂಜೇಶ್‌ನನ್ನು ಚಿಕ್ಕಮಗಳೂರಿಗೆ ಗಡಿಪಾರು ಮಾಡಲಾ ಗಿತ್ತು. ಕಾನೂನು ಪ್ರಕಾರ ಆತ ಸಂಬಂಧ ಪಟ್ಟ ಠಾಣೆಗೆ ಭೇಟಿ ನೀಡಿ ಸಹಿ ಹಾಕು ವುದು ವಾಡಿಕೆ. ಆ ಹಿನ್ನಲೆಯಲ್ಲಿ ಆತ ಅಲ್ಲಿಗೆ ಬಂದಿದ್ದ. ಇಡೀ ದಿನ ಚಿಕ್ಕಮಗಳೂರಿನಲ್ಲೇ ಇದ್ದ ಮಂಜೇಶ್ ರಾತ್ರಿ 11ರ ಬಳಿಕ ಕೆಎಸ್ ಆರ್‌ಟಿಸಿ ಬಸ್ ಮೂಲಕ ಹಾಸನಕ್ಕೆ ಬಂದಿರುವುದು ಏಕೆಂಬ ಪ್ರಶ್ನೆ ಕಾಡುತ್ತಿದೆ. ಪರಿ ಚಯಸ್ಥರೇ ಭೇಟಿಯಾಗುವುದಾಗಿ ಕರೆಸಿಕೊಂಡು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ.

## 4 ರಾಜ್ಯಸಭಾ ಸ್ಥಾನಗಳಿಗೆ ಐದು ನಾಮಪತ್ರ ಸಲ್ಲಿಕೆ

**ಬೆಂಗಳೂರು :** ರಾಜ್ಯದ ನಾಲ್ಕು ರಾಜ್ಯ ಸಭಾ ಸ್ಥಾನಗಳಿಗೆ ಜೂನ್ 18 ರಂದು ನಡೆಯುವ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಸೋಮವಾರದ ವೇಳೆಗೆ ಐದು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ರಾಜ್ಯಸಭೆ ಚುನಾವಣೆಗೆ ಪಕ್ಷೇತರ ಅಭ್ಯರ್ಥಿಯಾಗಿ ಕೊಡಗಿನ ಬೋಜಣ್ಣ ಸೋಮಯ್ಯ, ಮರು ಆಯ್ಕೆ ಬಯಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪವನ್ ಖೇರಾ ಹಾಗೂ ಮನ್ಸೂರ್ ಅಲಿ ಖಾನ್ ಕಾಂಗ್ರೆಸ್ ಅಭ್ಯರ್ಥಿಗಳಾಗಿ ಹಾಗೂ ಪ್ರೊ. ಎಂ.ನಾಗರಾಜ್ ಅವರು ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿ ಸಿದ್ದು, ಅವಿರೋಧವಾಗಿ ಆಯ್ಕೆಯಾಗುವ ಸಾಧ್ಯತೆ ಇದೆ. ಬಿಜೆಪಿ ಅಭ್ಯರ್ಥಿ ನಾಗರಾಜ ಅವರು ನಾಮಪತ್ರ ಸಲ್ಲಿಸಿದ್ದಾರೆ. ಜೂನ್ 9 ರಂದು ನಾಮಪತ್ರಗಳ ಪರಿಶೀಲನೆ, ಜೂನ್ 18 ರಂದು ಚುನಾವಣೆ ನಡೆಯಲಿದ್ದು, ಅಂದೆ ಮತ ಎಣಿಕೆ ನಡೆಯಲಿದೆ.

# ಅಫ್ಘಾನಿಸ್ತಾನದ ವಿರುದ್ಧ ಭಾರತಕ್ಕೆ ಐತಿಹಾಸಿಕ ಗೆಲುವು

## 93 ವರ್ಷಗಳ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಇದೇ ಮೊದಲು | ಮೂಲೆಗುಂಪಾಯ್ತು 8 ವರ್ಷದ ಹಿಂದಿನ ದಾಖಲೆ

• ಪ್ರಜೋದಯ ವರದಿ

**ಚಂಡೀಗಢ:** ಇಲ್ಲಿನ ಮಹಾರಾಜ ಯಾದವೀಂದ್ರ ಸಿಂಗ್ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಅಫ್ಘಾನಿಸ್ತಾನದ ವಿರುದ್ಧ ನಡೆದ ಏಕೈಕ ಟೆಸ್ಟ್ ಪಂದ್ಯದಲ್ಲಿ ಇನಿಂಗ್ಸ್ ಮತ್ತು 300 ರನ್‌ಗಳ ಬೃಹತ್ ಅಂತರದ ಜಯ ಸಾಧಿಸುವ ಮೂಲಕ ಶುಭಮನ್ ಗಿಲ್ ನಾಯಕತ್ವದ ಭಾರತೀಯ ಕ್ರಿಕೆಟ್ ತಂಡ ಹೊಸ ಇತಿಹಾಸ ಸೃಷ್ಟಿಸಿದೆ.

ಇದು ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಭಾರತ ದಾಖಲಿಸಿದ ಅತಿ ದೊಡ್ಡ ವಿಜಯವಾಗಿದೆ. ಹೀಗಾಗಿ ವಿರಾಟ್ ಕೊಹ್ಲಿ ಪಡೆಯು 2018ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ನಡೆದ ಪಂದ್ಯದಲ್ಲಿ ದಾಖಲಿಸಿದ್ದ ಇನ್ನಿಂಗ್ಸ್ ಮತ್ತು 272 ರನ್ ಗಳ ಅಂತರದ ಗೆಲುವೇ ಅತಿ ದೊಡ್ಡ ವಿಜಯವಾಗಿತ್ತು. ಇದನ್ನು ಈಗ ಶುಭಮನ್ ಗಿಲ್ ನನೇತೃತ್ವದ ತಂಡ ಮೆಟ್ಟಿ ನಿಂತಿದೆ.

ಪಂದ್ಯದ ಮೂರನೇ ದಿನವಾದ ಜೂನ್ 8ರ ಸೋಮವಾರದಂದೇ ಪಂದ್ಯ ಮುಕ್ತಾಯಗೊಂಡಿದ್ದು, ಆತಿಥೇಯ ಭಾರತ ತಂಡ ಆರಂಭದಿಂದ ಕೊನೆಯವರೆಗೂ ಸಂಪೂರ್ಣ ಪ್ರಾಬಲ್ಯ ಸಾಧಿಸಿತು.

ಮೊದಲ ದಿನದಂದು ಟಾಸ್ ಗೆದ್ದ ಗಿಲ್ ಬ್ಯಾಟಿಂಗ್ ಆಯ್ದುಕೊಂಡರು. ಭಾರತ ತಂಡ ತನ್ನ ಮೊದಲ ಇನಿಂಗ್ಸ್ ನಲ್ಲಿ ಕೆ.ಎಲ್. ರಾಹುಲ್ ಮತ್ತು ಶುಭಮನ್ ಗಿಲ್ ಅವರ ಅಮೋಘ ಶತಕಗಳ ನೆರವಿನಿಂದ 8 ವಿಕೆಟ್ ನಷ್ಟಕ್ಕೆ 564 ರನ್‌ಗಳ ದೊಡ್ಡ ಮೊತ್ತ ಕಲೆಹಾಕಿ ಇನಿಂಗ್ಸ್ ಡಿಕ್ಲೇರ್ ಮಾಡಿಕೊಂಡಿತು. ಕೆ.ಎಲ್.ರಾಹುಲ್ ಭರ್ಜರಿ 100 ಗಳಿಸಿದರೆ, ಶುಭಮನ್ ಗಿಲ್ ಅವರು 126 ರನ್ ಗಳಿಸಿ ಔಟಾದರು. ಆ ಬಳಿಕ ಸಾಯಿ ಸುದರ್ಶನ್ (81) ರಿಷಭ್ ಪಂತ್ (81) ಮತ್ತು ವಾಷಿಂಗ್ಟನ್ ಸುಂದರ್ (51) ಅರ್ಧಶತಕ ಗಳಿಸಿ ಬೃಹತ್ ಮೊತ್ತಕ್ಕೆ ಯೋಗದಾನ ನೀಡಿದರು.




ತದನಂತರ ಮೊದಲ ಇನಿಂಗ್ಸ್ ಬ್ಯಾಟ್ ಮಾಡಿದ ಅಫ್ಘಾನಿಸ್ತಾನ, ಪದಾರ್ಪಣೆ ಪಂದ್ಯವಾಡಿದ ಭಾರತದ ಯುವ ಸ್ಪಿನ್ನರ್ ಮಾನವ್ ಸುತಾರ್ ಅವರ 6 ವಿಕೆಟ್‌ಗಳ ಮಾರಕ ದಾಳಿಗೆ ಸಿಲುಕಿ ಕೇವಲ 152 ರನ್‌ಗಳಿಗೆ ಆಲೌಟ್ ಆಯಿತು. ಕನ್ನಡಿಗ ಪ್ರಸಿದ್ಧ ಕೃಷ್ಣ ಸಹ 3 ವಿಕೆಟ್ ಗಳಿಸಿದರು. 412 ರನ್ ಗಳ ಹಿನ್ನಡೆಯೊಂದಿಗೆ ಫಾಲೋ ಆನ್ ಗೆ ಗುರಿಯಾದ ಅಫ್ಘಾನಿಸ್ತಾನ ತಂಡ ಅದಕ್ಕಿಂತಲೂ ಕಡಿಮೆ ಮೊತ್ತಕ್ಕೆ ಅಂದರೆ 112 ರನ್ ಗಳಿಗೆ ಆಲೌಟ್ ಆ ಯಿ ಂ ತ್ ಂ . ವಾ ಶಿ ಂ ಗ್ಟ ನ್ ಸ್ ಂ ದ್ ರ್ ಅವರು 36ಕ್ಕೆ 4 ವಿಕೆಟ್ ಮತ್ತು ಕ್ ಂ ಲ್ ದೀ ಪ್ ಯ ಾ ದ್ ವ್ ಅವರು 3 ವಿಕೆಟ್ ಗಳಿಸಿದರು.

ಒ ಟ್ಟಾ ರ್ ಭಾರತದ ಸ್ಪಿನ್ನರ್‌ಗಳೇ ಅಫ್ಘಾನಿಸ್ತಾನದ ಬ್ಯಾಟರ್‌ಗಳನ್ನು ಕಟ್ಟಿ ಹಾಕಿದರು. ಪದಾರ್ಪಣೆ ಪಂದ್ಯದ ಮೊದಲ ಇನ್ನಿಂಗ್ಸ್ ನಲ್ಲಿ 6 ವಿಕೆಟ್ ಪಡೆದು ಮಿಂಚಿದ ಮಾನವ ಸುತಾರ್ ಅವರು ಅರ್ಹವಾಗಿ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಮೊದಲ ಬಾರಿ 300 ರನ್ ಗೆಲುವು

ಈ ಫಲಿತಾಂಶದೊಂದಿಗೆ ಭಾರತ ತಂಡವು ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ತನ್ನ ಅತ್ಯಂತ ದೊಡ್ಡ ಇನಿಂಗ್ಸ್ ಜಯವನ್ನು ದಾಖಲಿಸಿದೆ. ಭಾರತ ತಂಡವು ಇನಿಂಗ್ಸ್ ಮತ್ತು 300 ರನ್ ಗಳ ಅಂತರದಿಂದ ಪಂದ್ಯವನ್ನು ಗೆದ್ದಿರುವುದು ಇದೇ ಮೊದಲು. ಇದಕ್ಕೂ ಮುನ್ನ 2018ರಲ್ಲಿ ವಿರಾಟ್ ಕೊಹ್ಲಿ ನಾಯಕತ್ವದಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ದಾಖಲಿಸಿದ್ದ ಜಯವೇ ಭಾರತದ ಅತಿ ದೊಡ್ಡ ಇನಿಂಗ್ಸ್ ಗೆಲುವಿನ ದಾಖಲೆಯಾಗಿತ್ತು.

ಮತ್ತೊಂದೆಡೆ, ಇದು ಅಫ್ಘಾನಿಸ್ತಾನ ಟೆಸ್ಟ್ ಇತಿಹಾಸದಲ್ಲೇ ಅನುಭವಿಸಿದ ಅತ್ಯಂತ ಹೀನಾಯ ಸೋಲಾಗಿದೆ. ಇದರೊಂದಿಗೆ ಭಾರತ ತಂಡ ತನ್ನದೇ ಹಳೆಯ ವಿಶ್ವದಾಖಲೆಯನ್ನು ಮುರಿದಿದೆ. ಅಫ್ಘಾನ್ ತಂಡ ತನ್ನ ಟೆಸ್ಟ್ ಇತಿಹಾಸದಲ್ಲಿ ಇನಿಂಗ್ಸ್ ಸೋಲು ಕಂಡಿರುವುದು ಇದು ಕೇವಲ 3ನೇ ಬಾರಿ ಮಾತ್ರ. ವಿಶೇಷವೆಂದರೆ, ಇದರಲ್ಲಿ ಎರಡು ಬಾರಿ ಅವರು ಭಾರತದ ವಿರುದ್ಧವೇ ಇನಿಂಗ್ಸ್ ಸೋಲೊಪ್ಪಿಕೊಂಡಿದ್ದಾರೆ.

# ಜೈನ ಬಸದಿಯ ಜೀರ್ಣೋದ್ಧಾರಕ್ಕೆ ಸಂಕಲ್ಪ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಚಲ್ಯಾ ಗ್ರಾಮದಲ್ಲಿ ಪಾಳು ಬಿದ್ದಿರುವ ಶಿಥಿಲಾವಸ್ಥೆಯ ಹೊಯ್ಸಳರ ಕಾಲದ ಜೈನ ಬಸದಿ ಪತ್ತೆಯಾಗಿದ್ದು, ಶ್ರೀಕ್ಷೇತ್ರ ಶ್ರವಣಬೆಳಗೊಳ ದಿಗಂಬರ ಜೈನ ಮಹಾ ಸಂಸ್ಥಾನ ಮಠದ ಪೀಠಾಧಿಪತಿ ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಶೀಘ್ರದಲ್ಲಿ ಬಸದಿಯ ಜೀರ್ಣೋದ್ಧಾರಕ್ಕೆ ಸಂಕಲ್ಪ ಮಾಡಿದ್ದಾರೆ.

ಈ ಜೈನ ಬಸದಿಯ ಅವಶೇಷವು ಶ್ರವಣಬೆಳಗೊಳದಿಂದ 6 ಕಿ.ಮೀ. ದೂರದಲ್ಲಿದೆ. ವಾಸ್ತು ಪ್ರಕಾರ ಗರ್ಭಗುಡಿಯಲ್ಲಿ ಸಿಂಹ ಪೀಠವಿದ್ದು, ಯಕ್ಷಿಯರನ್ನು ಪ್ರತಿಷ್ಠಾಪಿಸಿರುವ ಮೂರ್ತಿಗಳಿವೆ. ಈ ಬಸದಿಯ ಪ್ರಾಂಗಣವು 16 ಕಲ್ಲಿನ ಕಂಬಗಳಿಂದ ಕೂಡಿದ್ದು, ಚಾವಣಿಯನ್ನು 25 ಹಾಸು ಕಲ್ಲುಗಳಿಂದ ನಿರ್ಮಿಸಲಾಗಿದೆ. ಬಸದಿಯು ಗಿಡ-ಗಂಟೆಗಳು ಬೆಳೆದು ಮುಚ್ಚಿಹೋಗಿದೆ.

ಪ್ರಾಚೀನ ಕಾಲದಲ್ಲಿ ಶಲ್ಯಾ ಎಂದಾಗಿದ್ದ ಈ ಗ್ರಾಮವು, 11ನೇ ಶತಮಾನದಲ್ಲಿ ಜೈನ ತೀರ್ಥಗಳಲ್ಲಿ



ಒಂದಾಗಿತ್ತು. ಕ್ರಿ.ಶ. 1124ರಲ್ಲಿ ನಂದಿಸಂಘ ದ್ರಮಿಳ ಗಣದ ಅರುಂಗಳಾನ್ವಯದ ಮಲ್ಲಿಷೇಣ ಮಾಲಧಾರಿಗಳ ಶಿಷ್ಯರು, ಹೊಯ್ಸಳ ಅರಸ ವಿಷ್ಣುವರ್ಧನನು ತಮ್ಮ ಗುರುಗಳಾದ ಶ್ರೀಪಾಲ ತ್ರೈವಿದ್ಯ ದೇವರಿಗಾಗಿ ಜಿನಾಲಯವನ್ನು ನಿರ್ಮಿಸಿ, ಅದನ್ನು ಹೊಯ್ಸಳ ಜಿನಾಲಯವೆಂದು ಕರೆದು ಚತುಸ್ಸೀಮೆಯ ಈ ಪ್ರದೇಶವನ್ನು ದತ್ತಿ ಬಿಟ್ಟರು ಎಂದು ಎಪಿಗ್ರಾಫಿಯ ಕರ್ನಾಟಕದಲ್ಲಿ (ಮೈಸೂರು ವಿಶ್ವ ವಿದ್ಯಾಲಯ) ನಮೂದಿಸಲಾಗಿದೆ. ಶಾಸನಗಳಲ್ಲಿ ಮಾಹಿತಿ ಇದೆಯೆಂದು ಸಾಹಿತಿ ಬೇಗೂರು ವೀರೇಂದ್ರ ಕುಮಾರ್ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಜಶೇಖರ, ಮಾಜಿ ಸದಸ್ಯರಾದ ನಾಗರಾಜು, ಕುಮಾರ, ನಿವೃತ್ತ ಮುಖ್ಯ ಶಿಕ್ಷಕರಾದ ಬಾಳಪ್ಪ, ಹೊನ್ನೇಗೌಡ, ಶ್ರವಣಬೆಳಗೊಳ ಗ್ರಾಮ ಪಂಚಾಯಿತಿಯ ಸದಸ್ಯ ಎಸ್.ಬಿ. ಯಶಸ್, ಗ್ರಾಮದ ಬೋರೇಗೌಡ, ಡೈರಿ ಜಗದೀಶ್ ಇನ್ನಿತರರಿದ್ದರು.

# ಸರ್ವೆ ಇಲಾಖೆ ವಿರುದ್ಧ ರೈತರ ಪ್ರತಿಭಟನೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಕೆಲ ವರ್ಷಗಳಿಂದ ಸರ್ವೆ ಇಲಾಖೆಯಲ್ಲಿ ರೈತರ ಕೆಲಸಗಳು ಸಮರ್ಪಕವಾಗಿ ಆಗದೆ ಸಾಕಷ್ಟು ತೊಂದರೆಯಾಗುತ್ತಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ರೈತ ಪರ್ವದ ವತಿಯಿಂದ ಪಟ್ಟಣದ ಮಿನಿ ವಿಧಾನಸೌಧದ ಎದುರು ರೈತ ಸಂಘದ ಮುಖಂಡರು ಪ್ರತಿಭಟನೆ ನಡೆಸಿದರು.

ರಾಜ್ಯ ರೈತ ಸಂಘದ ಸಂಚಾಲಕ ಮೀಸೆ ಮಂಜಣ್ಣ ಅವರು ಮಾತನಾಡಿ, ಹಲವು ವರ್ಷಗಳಿಂದ ರೈತರ ಜಮೀನಿಗೆ ಸರ್ವೆಗೆ ಬಾರದೆ ಇಲಾಖೆಯವರು ಬೇಜವಾಬ್ದಾರಿ ವರ್ತನೆ ತೋರುತ್ತಿದ್ದಾರೆ. ಸರ್ಕಾರ ಹಾಗೂ ಅಧಿಕಾರಿಗಳ ನಡುವೆ ನಡೆಯುತ್ತಿರುವ ಗುದ್ದಾಟಕ್ಕೆ ರೈತರು ಬಡವಾಗುತ್ತಿದ್ದಾರೆ. ಲಂಚ ನೀಡಿ ಜಮೀನಿನ ಸರ್ವೆ ಮಾಡಿಸಿಕೊಳ್ಳುವ ಪರಿಮಿತ



ಈ ಸಂಬಂಧ ಅಧಿಕಾರಿಗಳಿಗೆ ಕೇಳಿದರೆ ಸರ್ವೆ ಅಧಿಕಾರಿಗಳು ಮುಷ್ಕರವನ್ನು ನಡೆಸುತ್ತಿದ್ದಾರೆ, ಆದ್ದರಿಂದ ರೈತರ ಕೆಲಸ ನಡೆಸಲು ಆಗುತ್ತಿಲ್ಲ ಎಂದು ಸಮಜಾಯಿಸಿ ಉತ್ತರ ನೀಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಬಗ್ಗೆ ಸರ್ಕಾರ ಗಮನ ಹರಿಸದೆ ಬರೀ ಅಧಿಕಾರಕ್ಕಾಗಿ ಹೆಚ್ಚು ಮಹತ್ವವನ್ನು ನೀಡುತ್ತಿದೆ. ಆದರೆ ರೈತರ ಗೋಳು ಕೇಳುವವರು ಯಾರು, ರೈತರು ಹಲವು ವರ್ಷಗಳಿಂದ ಅರ್ಜಿ ಕಟ್ಟಿ ಸರ್ವೆ ಮಾಡಿಸಲು ಕಾಯುತ್ತಿದ್ದರೂ ಸಹ ಸ್ಥಳಗಳಿಗೆ ಭೇಟಿ ನೀಡಿ ರೈತರಿಗೆ ಅನುಕೂಲ ವಾಗುವಂತೆ ಇಲಾಖೆಯವರು ಕೆಲಸ ಮಾಡದೆ ಇರುವುದು ಖಂಡನೀಯ ಎಂದರು.

ಉಪ ತಹಸಿಲ್ದಾರ್ ಪವನ್ ಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ರೈತ ಸಂಘದ ಜಿಲ್ಲಾಧ್ಯಕ್ಷ ತಾಂಡವೇಶ್, ರೈತ ಮುಖಂಡರಾದ ಕುಮಾರ್, ಶಿವಣ್ಣ ಸೊಪ್ಪಿನಹಳ್ಳಿ, ಮಹೇಶ್, ರಂಗಸ್ವಾಮಿ, ಚಲುವರಾಜ್ ಮತ್ತಿತರರಿದ್ದರು.

# ಭಾರತದ ಸಂಸ್ಕೃತಿ ವಿಶ್ವಕ್ಕೆ ಮಾದರಿ: ಕೆರಗೋಡಿ ಶ್ರೀಗಳು

• ಪ್ರಜೋದಯ ವರದಿ

**ಅರಸೀಕೆರೆ:** ಹಿಂದೂ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಯನ್ನು ಹೆಚ್ಚಿಸಿಕೊಳ್ಳುವ ತಲೆ ಹೆಚ್ಚು ಗಮನ ಕೊಡಲಾಗುತ್ತಿದ್ದು ಸಂಸ್ಕೃತಿ ನೈತಿಕತೆಯ ಬಗ್ಗೆ ಯಾರು ಗಮನ ಕೊಡುತ್ತಿಲ್ಲ ಎಂದು ಕೆರಗೋಡಿ ರಂಗ ಪರಮತದ ಸ್ವಾಮಿಗಳು ವಿಷಾದ ವ್ಯಕ್ತಪಡಿಸಿದರು.

ನಗರದ ಹೊಯ್ಸಳನಗರ ಬಡಾವಣೆಯಲ್ಲಿರುವ ಜೆಎಸ್ ಕನ್ನಿಕಾ ಆಂಗ್ಲ ಶಾಲೆಯಲ್ಲಿ ಆಯೋಜಿಸಿದ್ದ ಅಕ್ಷರ ಅಭ್ಯಾಸ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿ ಆಶೀರ್ವಚನ ನೀಡಿದ ಅವರು ನಮ್ಮ ದೇಶದ ಸಂಸ್ಕೃತಿ ಪಾಶ್ಚಿಮಾತ್ಯರು ಸಹ ಯೋಗ ಧ್ಯಾನ ಮುಂತಾದವುಗಳನ್ನು ಅನುಸರಿಸುತ್ತಿದ್ದಾರೆ. ನಮ್ಮ ರಾಷ್ಟ್ರ ತನ್ನದೇ ಆದ ಸಂಸ್ಕೃತಿಯನ್ನು ಹೊಂದಿದೆ. ಈ ನಾಡಿನಲ್ಲಿ ಸಾಧು ಸಂತರು ಮಹಾತ್ಮರು



ಜನ್ಮ ತಾಳಿ ಮಾನವನ ಸುಖ ಜೀವನಕ್ಕೆ ಅನೇಕ ಸಂದೇಶಗಳನ್ನು ನೀಡಿದ್ದಾರೆ ಎಂದು ತಿಳಿಸಿದರು.

ಶಾಲೆಗಳಲ್ಲಿ ವಿದ್ಯಾಭ್ಯಾಸದೊಂದಿಗೆ ಸಂಸ್ಕೃತಿಯನ್ನು ಮಕ್ಕಳಿಗೆ ತಿಳಿಸಿಕೊಡಬೇಕು ಸಂಸ್ಕೃತಿಯ ಕೊರತೆಯಿಂದಾಗಿ ಇಂದು ಅನೇಕ ಯುವಜನತೆ ದುರ್ನಡತೆಯಲ್ಲಿ ನಡೆಯುತ್ತಿದ್ದಾರೆ. ಎಂದು ಅವರು ಶಾಲೆಯಲ್ಲಿ ಮಕ್ಕಳು ಸ್ವಲ್ಪ ಸಮಯ ಇರುತ್ತಾರೆ ಮನೆಯಲ್ಲಿ ಪೋಷಕರು ಮಕ್ಕಳ ಓದಿನ ಬಗ್ಗೆ ಮತ್ತು ಅವರಿಗೆ ನೀತಿ ಕಥೆಗಳನ್ನು ಹೇಳುವ ಮೂಲಕ ಮತ್ತು ಶಾಲೆಯಲ್ಲಿ ಆದ ಪಾಠಗಳನ್ನು ಪುನಃ ಮನೆಯಲ್ಲಿ ಮನನ ಮಾಡುವಂತೆ ಹಾಗೂ ಮಕ್ಕಳ ಎದುರು ಪೋಷಕರು ಮಾತನಾಡುವಾಗ ಬಹಳ ಎಚ್ಚರ ವಹಿಸಬೇಕು ಎಂದ ಅವರು, ವಿದ್ಯಾರ್ಥಿಗಳು ಸತ್ಪ್ರಜೆಯಾಗಲು ಪೋಷಕರು ಮತ್ತು ಶಿಕ್ಷಕರು ಹೆಚ್ಚಿನ ಜವಾಬ್ದಾರಿಯನ್ನು ವಹಿಸಬೇಕಾಗುತ್ತದೆ. ಈ ಶಾಲೆಯಲ್ಲಿ ಒಳ್ಳೆಯ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ನೀಡುತ್ತಿದ್ದಾರೆ ಒಳ್ಳೆಯ ಶಿಕ್ಷಕರಿದ್ದಾರೆ, ಮುಖ್ಯ ಶಿಕ್ಷಕರು ವಿಶೇಷ ಕಾಳಜಿ ವಹಿಸಿದ್ದಾರೆ ಎಂದು ಹೇಳಿದರು.

ಶಾಲಾ ಮುಖ್ಯ ಶಿಕ್ಷಕ ಮಲ್ಲಿಕಾರ್ಜುನ್ ಪ್ರತಿ ವರ್ಷ ನಾವು ಮಕ್ಕಳಿಗೆ ಅಕ್ಷರ ಅಭ್ಯಾಸ ಮಾಡಿಸಲು ಕೆರೆಗೋಡಿ ರಂಗಾಪುರ ಮಠದ ಶ್ರೀಗಳನ್ನು ಬರಮಾಡಿಕೊಳ್ಳುತ್ತಿದ್ದೇವೆ ಅವರು ನಮ್ಮ ಮಕ್ಕಳ ಮೇಲೆ ಅಪರಿಮಿತವಾದ ಪ್ರೀತಿಯನ್ನು ಹೊಂದಿದ್ದಾರೆ ಅವರ ಆಶೀರ್ವಾದ ನಮಗೆಲ್ಲ ಬಹಳ ಅಗತ್ಯ ಎಂದರು

ಜೇನುಕಲ್ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ಜಿ.ಎಸ್.ಶಿವಲಿಂಗಪ್ಪ ಮತ್ತು ಸಿಆರ್‌ಪಿ ವಿಷ್ಣುವರ್ಧನ್ ಕಾರ್ಯದರ್ಶಿ ಲತಾ ರಾಜೇಶ್, ಖಜಾಂಚಿ ರವೀಂದ್ರನಾಥ್, ಸದಸ್ಯರಾದ ದಯಾನಂದ ಬಸವರಾಜ್ ಪತ್ರಕರ್ತ ಎಚ್.ಡಿ.ಸೀತಾರಾಂ ಇದ್ದರು.

# ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ



**ಹಾಸನ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ 66/11 ಕೆ.ವಿ. ಬಸವಾಘಟ್ಟ ವಿ.ವಿ. ಕೇಂದ್ರ ಮತ್ತು 66/11 ಕೆವಿ ಮಾರ್ಗಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಜೂ. 9 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಜಾಡಘಟ್ಟ, ಆದಿಹಳ್ಳಿ, ರಂಗಾಪುರ, ಬೆಲವತ್ತಹಳ್ಳಿ, ಭೈರಾಪುರ, ವೇದಾವತಿ, ಹೊನ್ನಾವರ, ಸಿದ್ದಾಪುರ, ಪೂಮಗಾಮೆ, ಬಸವಘಟ್ಟ, ಬಾಗೇಶಪುರ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ತಿಳಿಸಲಾಗಿದೆ.

# ವಿವಿಧ ಗ್ರಾಮಗಳ ರಸ್ತೆ ಅಭಿವೃದ್ಧಿಗೆ ಸೂರಜ್ ರೇವಣ್ಣ ಚಾಲನೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ದಂಡಿಗನಹಳ್ಳಿ ಹೋಬಳಿಯ 10 ಗ್ರಾಮಗಳಲ್ಲಿ 2.5 ಕೋಟಿ ರೂ. ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣಕ್ಕೆ ಪೂಜೆ ಸಲ್ಲಿಸಲಾಗಿದ್ದು, ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಬೇಕೆಂದು ವಿಧಾನಪರಿಷತ್ತು ಸದಸ್ಯ ಡಾ.ಸೂರಜ್ ರೇವಣ್ಣ ಹೇಳಿದರು.

ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿಯಲ್ಲಿ ಮೊದಲ ಹಂತದಲ್ಲಿ ಕೈಗೊಳ್ಳಲಾಗಿರುವ 2.5 ಕೋಟಿ ವೆಚ್ಚದ ರಸ್ತೆ, ಚರಂಡಿ ನಿರ್ಮಾಣಕ್ಕೆ ಸೋಮವಾರ ಹಲವು ಗ್ರಾಮಗಳಲ್ಲಿ ಗುದ್ದಲಿ ಪೂಜೆ ನೇರವೇರಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಶಾಸಕರಿಗೆ ಹಂಚಿಕೆ ಮಾಡಿರುವ ಅನುದಾನದಡಿ ರಸ್ತೆ, ಚರಂಡಿ ನಿರ್ಮಾಣದ ಕಾಮಗಾರಿಗಳಿಗೆ ಚಾಲನೆ



ನೀಡಲಾಗಿದೆ ಎಂದು ತಿಳಿಸಿದರು.

ಹೋಬಳಿಯ ಎನ್.ಬಿಂಡೇನಹಳ್ಳಿ, ಹೊನ್ನಶೆಟ್ಟಿಹಳ್ಳಿ, ಆಗ್ರಹಾರ, ಎ.ಚೋಳೇನಹಳ್ಳಿ, ನಾರಾಯಣಪುರ, ನಾಡನಹಳ್ಳಿ, ಪಿಳ್ಳಳ್ಳಿ, ಚನ್ನಾಪುರ, ಗೆಜ್ಜಗಾರನಹಳ್ಳಿ ಮತ್ತು ಆನೇಕೆರೆ ಗ್ರಾಮಗಳಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಎಷ್ಟು ರಸ್ತೆ ಮಾಡಿದವು ಅನ್ನುವುದಕ್ಕಿಂತ ಅಗತ್ಯವಿರುವ, ಜನರಿಗೆ ಹೆಚ್ಚು ಅನುಕೂಲವಾಗುವ ರಸ್ತೆ ನಿರ್ಮಾಣ ಮಾಡುವುದು ಮುಖ್ಯವಾಗುತ್ತದೆ. ಪ್ರತಿ ಕಾಮಗಾರಿಗೆ 10 ರಿಂದ 15 ಲಕ್ಷ ರೂ. ಅನುದಾನ ಹಂಚಿಕೆ ಮಾಡಲಾಗಿದೆ. ಗುಣಮಟ್ಟದ ಕಾಮಗಾರಿಗೆ ಸೂಚಿಸಲಾಗಿದೆ. ರಸ್ತೆ ಪೂಜೆ ವೇಳೆ ಪ್ರತಿ ಗ್ರಾಮಗಳಲ್ಲಿ ರಸ್ತೆ ನಿರ್ಮಾಣದೊಂದಿಗೆ ಹಲವು ಅಭಿವೃದ್ಧಿ ಕಾರ್ಯಗಳನ್ನು ನನ್ನ ಗಮನಕೆ ಸಾರ್ವಜನಿಕರು ತಂದಿದ್ದು, ಅನುದಾನ ಲಭ್ಯತೆಗೆ ಅನುಗುಣವಾಗಿ ಆದ್ಯತೆ ಮೇರೆಗೆ ಕಾಮಗಾರಿ ಕೈಗೊಳ್ಳಲಾಗುವುದು ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಜೆಡಿಎಸ್ ಕಾರ್ಯಕರ್ತರನ್ನು ತಮ್ಮ ಪಕ್ಷಕ್ಕೆ ಆಹ್ವಾನಿಸಿರುವ ಬಗೆ ಕೇಳಲಾದ ಪ್ರಶ್ನೆಗೆ, ಮೊದಲಿಗೆ ಅವರು 6 ತಿಂಗಳು ನಿರ್ವಿಘ್ನವಾಗಿ ರಾಜ್ಯಭಾರ ಮಾಡಲಿ, ನಂತರ ಅವರು ನಮ್ಮ ಕಾರ್ಯಕರ್ತರನ್ನು ಆಹ್ವಾನಿಸಿರುವ ಕುರಿತು ಮಾತನಾಡುತ್ತೇನೆ ಎಂದರು.

ಮುಖಂಡರಾದ ಆನೇಕೆರೆ ಬಾಲಚಂದ್ರ, ಹೊನ್ನಶೆಟ್ಟಿಹಳ್ಳಿ ನಾಗರಾಜು, ಕೆ.ಜೆ.ಸುರೇಶ್, ಪುಟ್ಟಪ್ಪ, ಲಕ್ಕೇಗೌಡ, ಪ್ರಭ, ದಿನೇಶ್, ಸೋಮಶೇಖರ, ಚಂದ್ರಣ್ಣ ಸೇರಿ ಇತರರು ಇದ್ದರು.

# ಗರ್ಭಿಣಿಯರ ಆರೋಗ್ಯ: ಕಿಲ್ಕಾರಿ ಸೇವೆ ಮಹತ್ವದ ಪಾತ್ರ

• ಪ್ರಜೋದಯ ವರದಿ

**ಅರಕಲಗೂಡು:** ಗರ್ಭಿಣಿಯರ ಆರೋಗ್ಯ, ಹೆರಿಗೆ ಪೂರ್ವ ಹಾಗೂ ನಂತರದ ಆರೈಕೆಯಲ್ಲಿ ಕಿಲ್ಕಾರಿ ಸೇವೆ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಮೈಸೂರು ವಿಭಾಗದ ಕಿಲ್ಕಾರಿ ಕಾರ್ಯಕ್ರಮ ಅಧಿಕಾರಿ ಗುರುಪಾದ ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪಟ್ಟಣದ ತಾಲ್ಲೂಕು ಆರೋಗ್ಯ ಇಲಾಖೆ ಕಚೇರಿ ಸಭಾಂಗಣದಲ್ಲಿ ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸುರಕ್ಷತಾ ಅಧಿಕಾರಿಗಳಿಗೆ ಏರ್ಪಡಿಸಿದ್ದ ಕಿಲ್ಕಾರಿ ಸೇವೆ ಕುರಿತ ಜಾಗೃತಿ ಮತ್ತು ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕಿಲ್ಕಾರಿ ಸೇವೆ ಭಾರತ ಸರ್ಕಾರದ ಆರೋಗ್ಯ ಮತ್ತು

## ಉಚಿತ ಮೊಬೈಲ್ ಆರೋಗ್ಯ ಸೇವೆ: ಗುರುಪಾದ



ಕುಟುಂಬ ಕಲ್ಯಾಣ ಸಚಿವಾಲಯದ ಉಚಿತ ಮೊಬೈಲ್ ಆರೋಗ್ಯ ಸೇವೆಯಾಗಿದೆ ಎಂದರು.

ನವಜಾತ ಶಿಶುಗಳ ಆರೋಗ್ಯ, ಲಸಿಕೆ, ಪೌಷ್ಟಿಕ ಆಹಾರ ಮತ್ತು ತಾಯಿ ಮಗು ಸುರಕ್ಷತೆ ಕುರಿತು ಜಾಗೃತಿ ಮೂಡಿಸುವಲ್ಲಿ ನೊಂದಾಯಿತ ಫಲಾನುಭವಿ ಗರ್ಭಿಣಿಯರು ಹಾಗೂ ತಾಯಂದಿರಿಗೆ ಗರ್ಭಧಾರಣೆಯ ನಾಲ್ಕನೇ ತಿಂಗಳಿಂದ ಮಗುವಿನ ಮೊದಲ ಜನ್ಮದಿನದವರೆಗೆ ಆರೋಗ್ಯ ಸಂಬಂಧಿತ ಮಾಹಿತಿಯನ್ನು ಉಚಿತವಾಗಿ ಮೊಬೈಲ್ ಕರೆಗಳು ಹಾಗೂ ತಿಂಗಳಿಗೊಮ್ಮೆ ಧ್ವನಿ ಸಂದೇಶದ ಮೂಲಕ ಮಾಹಿತಿ ನೀಡಲಾಗುತ್ತದೆ ಎಂದರು.

ಕಿಲ್ಕಾರಿ ಸೇವೆಯ ಸದುಪಯೋಗ ಪಡೆಯಲು 14423 ಸಂಖ್ಯೆಗೆ ಪುನಃ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಹಾಗೂ 1600403660 ಸಂಖ್ಯೆಯಿಂದ ನೊಂದಾಯಿತ ಫಲಾನುಭವಿಗಳ ಮೊಬೈಲ್ ಸಂಖ್ಯೆಗೆ ಕರೆ ಬರುತ್ತದೆ. ಫಲಾನುಭವಿಗಳು ಕರೆ ಸ್ವೀಕಾರ ಮಾಡಿ ಮಾಹಿತಿ ಪಡೆಯಬಹುದಾಗಿದೆ. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಈ ಕುರಿತು ಅರಿವು ಮೂಡಿಸುವ ಕಾರ್ಯ ನಡೆಸಬೇಕು. ಪ್ರತಿಯೊಬ್ಬ ಫಲಾನುಭವಿಯನ್ನು ನೊಂದಾವಣೆ ಮಾಡಿಸಿ ಎಲ್ಲರಿಗೂ ಈ ಸೇವಾಸೌಲಭ್ಯ ದೊರಕುವಂತೆ ಮಾಡುವ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸಬೇಕು ಎಂದು ಅವರು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಪುಷ್ಪಲತಾ, ಆಶಾ ಮೆಂಟರ್ ಕವಿತಾ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳ ಉಪಸ್ಥಿತರಿದ್ದರು.


# ರಾಜ್ಯದಲ್ಲಿ ಮೂರು ದಿನ ಭಾರೀ ಮಳೆ ಸಾಧ್ಯತೆ

• ಪ್ರಜೋದಯ ವರದಿ

**ಬೆಂಗಳೂರು:** ನೈರುತ್ಯ ಮುಂಗಾರು ಚೇತರಿಸಿಕೊಂಡಿದ್ದು, ರಾಜ್ಯಾದ್ಯಂತ ವ್ಯಾಪಕ ಮಳೆಯಾಗುತ್ತಿದೆ. ಕರಾವಳಿ ಭಾಗದ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ಇನ್ನು ಮೂರು ದಿನಗಳ ಕಾಲ ರಾಜ್ಯದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಉತ್ತರಕನ್ನಡ, ಹಾವೇರಿ, ಧಾರವಾಡ, ರಾಯಚೂರು ಜಿಲ್ಲೆಗಳಲ್ಲೂ ಭಾರೀ ಮಳೆಯಾಗುವ ಸಾಧ್ಯತೆಗಳಿದ್ದು, ಆರೆಂಜ್ ಅಲರ್ಟ್ ನೀಡಲಾಗಿದೆ.

ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ಬಾಗಲಕೋಟೆ, ಬೆಳ



ಗಾವಿ, ಗದಗ, ಕೊಪ್ಪಳ, ಹಾಸನ, ತುಮಕೂರು, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲೂ ಭಾರೀ ಮಳೆಯಾಗುವ ಮುನ್ಸೂಚನೆಗಳಿದ್ದು, ಯಲ್ಲೋ ಅಲರ್ಟ್ ನೀಡಲಾಗಿದೆ.

ಕೋಲಾರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಬೆಂಗಳೂರು ದಕ್ಷಿಣ, ಮಂಡ್ಯ, ಮೈಸೂರು, ಚಾಮರಾಜನಗರ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಳ್ಳಾರಿ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ.

ರಾಜ್ಯಾದ್ಯಂತ ಮೋಡ ಕವಿದ ವಾತಾವರಣವಿದ್ದು, ಆಗಾಗ್ಗೆ ಬಲವಾದ ಮೇಲ್ಮೈ ಗಾಳಿ ಬೀಸಲಿದೆ. ಜೊತೆಗೆ ಆಗಾಗ್ಗೆ ಮಳೆಯೂ ಬೀಳಲಿದೆ. ಕರಾವಳಿ, ಮಲೆನಾಡು ಭಾಗದಲ್ಲಿ ಭಾರೀ ಮಳೆಯಾದರೆ ರಾಜ್ಯದ ಒಳನಾಡಿನಲ್ಲಿ ಸಾಧಾರಣ ಮಳೆಯಾಗಲಿದೆ. ಕೆಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಧಾರಾಕಾರ ಮಳೆಯಾಗುವ ಲಕ್ಷಣಗಳು ಗೋಚರಿಸುತ್ತಿವೆ.

ಕರಾವಳಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ. ಕುಂದಾಪುರದಲ್ಲಿ 75 ಮಿ.ಮೀನಷ್ಟು ಅತ್ಯಧಿಕ ಪ್ರಮಾಣದ ಮಳೆಯಾಗಿದೆ.

ಕೆಲವು ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಿದ್ದರೆ, ಮತ್ತೆ ಕೆಲವು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ.

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ: ಶಾಸಕ ಹೆಚ್.ಕೆ.ಸುರೇಶ್

• ಪ್ರಜೋದಯ ವರದಿ

**ಬೇಲೂರು:** ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದ್ದು, ವಿಶ್ವ ಪರಿಸರ ದಿನಾಚರಣೆ ಒಂದು ದಿನಕ್ಕೆ ಸೀಮಿತವಾಗದೆ ಪ್ರತಿದಿನವೂ ಪರಿಸರದ ಬಗ್ಗೆ ಕಾಳಜಿ ವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಶಾಸಕ ಹೆಚ್.ಕೆ. ಸುರೇಶ್ ಹೇಳಿದರು.

ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಭಾರತ ಜ್ಞಾನ ವಿಜ್ಞಾನ ಸಮಿತಿ (ಬಿಜಿವಿಎಸ್), ಅರಣ್ಯ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಹಸಿರು ಭೂಮಿ ಪ್ರತಿಷ್ಠಾನ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಿಳಾ ಘಟಕದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಪರಿಸರ ಜಾಗೃತಿ ಜಾಥಾ ಹಾಗೂ ಸಸಿ ನೆಡುವ ಕಾರ್ಯಕ್ರಮ ಉದ್ಘಾಟಿಸಿ ಅವರು




ಮಾತನಾಡಿ, ಪರಿಸರ ಸಂರಕ್ಷಣೆಯಲ್ಲಿ ಸಾರ್ವಜನಿಕರು, ಅಧಿಕಾರಿಗಳು, ಪರಿಸರವಾದಿಗಳು ಹಾಗೂ ಶಾಲಾ ಮಕ್ಕಳ ಸಹಭಾಗಿತ್ವ ಅತ್ಯಗತ್ಯವಾಗಿದೆ. ಇಂದಿನ ಮಕ್ಕಳೇ ನಾಳಿನ ಪ್ರಜೆಗಳಾಗಿರುವುದರಿಂದ ಅವರಲ್ಲಿ ಪರಿಸರದ ಬಗ್ಗೆ ಅರಿವು ಮೂಡಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಗಿಡವನ್ನು ನೆಟ್ಟು, ಅದನ್ನು ಪೋಷಿಸಿ ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು. ಪರಿಸರ ಮತ್ತು ಪ್ರಕೃತಿ ಇಲ್ಲದೆ ಮಾನವ ಜೀವನ ಅಸಾಧ್ಯವಾಗಿದ್ದು, ಉತ್ತಮ ಆರೋಗ್ಯ ಹಾಗೂ ಸುಂದರ ಭವಿಷ್ಯಕ್ಕಾಗಿ ಪರಿಸರ ಉಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮೋಹನ್ ಮಾತನಾಡಿ, ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪರಿಸರ ಜಾಗೃತಿ ಜಾಥಾ ಮತ್ತು ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ಪೋಷಕರು ತಮ್ಮ ಮನೆಗಳಲ್ಲಿ ಕನಿಷ್ಠ ಒಂದು ಸಸಿಯನ್ನು ನೆಟ್ಟು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಹಾಸನ ಜಿಲ್ಲೆಯಲ್ಲಿ ಈ ವರ್ಷ 5 ರಿಂದ 7 ಲಕ್ಷ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದ್ದು, ಬೇಲೂರು ವ್ಯಾಪ್ತಿಯಲ್ಲೇ 1ರಿಂದ 1.5 ಲಕ್ಷ ಸಸಿಗಳನ್ನು ಮಳೆಗಾಲದಲ್ಲಿ ನೆಡಲು ಯೋಜಿಸಲಾಗಿದೆ ಎಂದು ತಿಳಿಸಿದರು. ಹಗರೇ, ಕಲ್ಲಹಳ್ಳಿ, ಆರ್.ಡಿ. ಹಳ್ಳಿ, ಐದಹಳ್ಳಿ ಹಾಗೂ ಹಳೇಬೀಡು ಹೋಬಳಿ ವ್ಯಾಪ್ತಿಯಂತಹ ಕಡಿಮೆ ಮಳೆ ಬೀಳುವ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಡುವ ಮೂಲಕ ಹಸಿರು ವಾತಾವರಣ ನಿರ್ಮಿಸಲು ಅರಣ್ಯ ಇಲಾಖೆ ಕ್ರಮ ಕೈಗೊಂಡಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಶಾಲಾ ವಿದ್ಯಾರ್ಥಿಗಳು ವೀರಶೈವ ಸಮುದಾಯ ಭವನದಿಂದ ಚನ್ನಕೇಶವ ದಾಸೋಹ ಭವನದವರೆಗೆ ಪರಿಸರ ಜಾಗೃತಿ ಜಾಥಾ ನಡೆಸಿ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಜನರಲ್ಲಿ ಅರಿವು ಮೂಡಿಸಿದರು.

ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ, ಬಿಜಿವಿಎಸ್ ಅಧ್ಯಕ್ಷ ಹೆಚ್. ಆರ್. ಚಂದ್ರು, ಪುರಸಭೆ ಅಧ್ಯಕ್ಷ ಅಕ್ರಮ ಪಾಷಾ, ಪಿಎಸ್‌ಐ ಎಸ್.ಜಿ. ಪಾಟೀಲ್ ಇತರರು ಉಪಸ್ಥಿತರಿದ್ದರು.

# ಉಚಿತ ಬಸ್ ಪಾಸ್‌ಗೆ ಅರ್ಜಿ ಆಹ್ವಾನ

• ಪ್ರಜೋದಯ ವರದಿ

**ಹಾಸನ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು, ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ಕಾರ್ಯ ನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ ಪೂರ್ಣಾವಧಿ, ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ, ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

2025ರ ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ, ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.

ಆನ್ ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು, ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ.

ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಜೂನ್ 20 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ತಿಳಿಸಿದ್ದಾರೆ.

## ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾರ್ಯಪ್ರವೃತ್ತರಾಗಬೇಕು: ಕಿಶೋರ್‌ಕುಮಾರ್

# ಪಶ್ಚಿಮ ಘಟ್ಟಗಳು ದಕ್ಷಿಣ ಭಾರತದ ಜಲಪಾತ್ರೆ

• ಪ್ರಜೋದಯ ವರದಿ

**ಹಾಸನ:** ಪರಿಸರ ಸಂರಕ್ಷಣೆ ಪ್ರಸ್ತುತ ಸಮಾಜದ ಸರ್ವರ ಹೊಣೆಗಾರಿಕೆ ಆಗಿದ್ದು, ಪ್ರತಿಯೊಬ್ಬರೂ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಹಿರಿಯ ವಕೀಲ ಅಕ್ರೂಡ್ ಸಂಸ್ಥೆಯ ಕಾರ್ಯದರ್ಶಿ ಕಿಶೋರ್ ಕುಮಾರ್ ಕರೆ ನೀಡಿದ್ದಾರೆ.

ನಗರದ ಸಾಧನಾ ಪಿ.ಯು. ಕಾಲೇಜು ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಕರ್ನಾಟಕ ಔಷಧೀಯ ಸಸ್ಯ ಮಂಡಳಿ, ಬೆಂಗಳೂರು ಹಾಗೂ ಅಕ್ರೂಡ್ ಟ್ರಸ್ಟ್ ಸಹಯೋಗದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಡುವ ಮೂಲಕ ಪರಿಸರ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪರಿಸರವಾದಿ ಎಚ್.ಪಿ.ಮೋಹನ್ ಅವರು ಮಾತನಾಡಿ, ಜಾಗತಿಕ ತಾಪಮಾನ ಏರಿಕೆ, ಹಸಿರುಮನೆ




ಪರಿಣಾಮ ಹಾಗೂ ಪರಿಸರ ಸಂರಕ್ಷಣೆಯಲ್ಲಿ ಮರಗಳ ಪಾತ್ರವನ್ನು ಸಮಗ್ರವಾಗಿ ವಿವರಿಸಿದರು. ತ್ಯಾಜ್ಯ ವಸ್ತುಗಳನ್ನು ವಿಂಗಡಿಸಿ ವಿಲೇವಾರಿ ಮಾಡಿ ಮರು ಬಳಕೆ ಮಾಡಬೇಕಿದೆ ಎಂದು ಸಲಹೆ ನೀಡಿದರು.

ಅನಂತಪುರದ ಜೆ.ಎನ್‌ಟಿಯು ಕಾಲೇಜಿನ ನಿವೃತ್ತ ಉಪ ಕುಲಪತಿ ಡಾ.ಪ್ರಹ್ಲಾದ್‌ರಾವ್ ಮಾತನಾಡಿ, ಪ್ರತಿಯೊಬ್ಬರೂ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಆಶಿಸಿ ಪಂಚಭೂತಗಳ ಮಹತ್ವವನ್ನು ವಿವರಿಸಿದರು.

ಕಿಶೋರ್ ಕುಮಾರ್ ಮಾತನಾಡಿ, ಭಾರತೀಯ ಪರ್ಯಾಯ ದ್ವೀಪದ ಪ್ರಾಥಮಿಕ ನೀರಿನ ಮೂಲವನ್ನು ರಕ್ಷಿಸಲು ಪಶ್ಚಿಮ ಘಟ್ಟವನ್ನು ಸಂರಕ್ಷಿಸುವುದು ಅನಿವಾರ್ಯವಾಗಿದ್ದು, ಈ ಭಾಗದ ಜನರ ಹೋರಾಟವನ್ನು ವಿವರಿಸಿ ಗುಂಡ್ಯ ಜಲ ವಿದ್ಯುತ್ ಯೋಜನೆ ಯಲ್ಲಿ ಸಫಲತೆ ಪಡೆದೆವು. ಆದರೆ ಎತ್ತಿನಹೊಳೆ ಯೋಜನೆಯಲ್ಲಿ ವಿಫಲೆ ೦ಟಾಗಿದ್ದು, ಇಂದಿಗೂ ಹೋರಾಟ ಮುಂದುವರೆದಿದೆ ಎಂದರು.

ಎತ್ತಿನಹೊಳೆ ಯೋಜನೆಯಲ್ಲಿನ ಕರ್ನಾಟಕ ಔಷಧೀಯ ಸಸ್ಯ ಪ್ರಾಧಿಕಾರದ ಹಿರಿಯ ಸಲಹೆಗಾರಾದ ಡಾ. ಪ್ರಭು ಅವರು ಮಾತನಾಡಿ, ಭಾರತೀಯ ಪರಂಪರೆಯಿಂದ ಬಂದಿರುವ ಔಷಧೀಯ ಸಸ್ಯಗಳ ವೈವಿಧ್ಯತೆ, ಸಂರಕ್ಷಣೆ ಹಾಗೂ ಸುಸ್ಥಿರ ಬಳಕೆಯ ಮಹತ್ವದ ಕುರಿತು ಮಾಹಿತಿ ನೀಡಿದರಲ್ಲದೆ, ಈಚೆಗೆ ಕಳಪೆ ಗುಣಮಟ್ಟದ ವಿಲಕ್ಷಣ ಸಸ್ಯಗಳು ತಲೆ ಎತ್ತುತ್ತಿದ್ದು ಮೂಲ ಗಿಡಗಳು ಕಣ್ಮರೆಯಾಗುತ್ತಿವೆ ಎಂದು ಆತಂಕಿಸಿದರು.

ಡಾ.ಪುಷ್ಪಾ ಅವರು ವಿಶ್ವ ಪರಿಸರ ದಿನ 2026ರ ಧ್ಯೇಯವಾದ ಪ್ರಕೃತಿಯಿಂದ ಪ್ರೇರಣೆ, ಹವಾಮಾನಕ್ಕಾಗಿ, ನಮ್ಮ ಭವಿಷ್ಯಕ್ಕಾಗಿ ಎಂಬ ಘೋಷಣಾ ವಾಕ್ಯ ನಾನು ನಮ್ಮ ಭೂಮಿಯನ್ನು ಸ್ವಚ್ಛವಾಗಿ, ಹಸಿರಾಗಿ ಮತ್ತು ಸುರಕ್ಷಿತವಾಗಿಡಲು ಇಂದು ಗಂಭೀರವಾಗಿ ಪ್ರತಿಜ್ಞೆ ಮಾಡುತ್ತೇನೆ. ನಾನು ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡುತ್ತೇನೆ, ಹೆಚ್ಚು ಮರಗಳನ್ನು ನೆಡುತ್ತೇನೆ, ನೀರು ಮತ್ತು ವಿದ್ಯುತ್ತನ್ನು ಸಂರಕ್ಷಿಸುತ್ತೇನೆ. ನಮ್ಮ ನದಿಗಳನ್ನು ಮತ್ತು ಗಾಳಿಯನ್ನು ಮಾಲಿನ್ಯದಿಂದ ಮುಕ್ತವಾಗಿಡಲು ಶ್ರಮಿಸುತ್ತೇನೆ. ಪ್ರಕೃತಿಯನ್ನು ರಕ್ಷಿಸುವುದು ನನ್ನ ಕರ್ತವ್ಯವೆಂದು ತಿಳಿದು, ಪರಿಸರ ಸ್ನೇಹಿ ಜೀವನಶೈಲಿಯನ್ನು ಅಳವಡಿಸಿಕೊಳ್ಳುತ್ತೇನೆ. ಎಂಬ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಸಾಧನಾ ಕಾಲೇಜಿನ ಡಾ. ಶೈಲಜಾ ಕುಮಾರಿ, ಹಿರಿಯ ಪತ್ರಕರ್ತೆ ಲೀಲಾವತಿ, ವಿಜಯ ಶಾಲೆಯ ಅಧ್ಯಕ್ಷ ವೈ.ಎನ್. ಸುಬ್ಬಸ್ವಾಮಿ, ರೆಡ್ ಕ್ರಾಸ್ ಸಂಸ್ಥೆಯ ಡಾ.ವೀರಭದ್ರಪ್ಪ, ಪ್ರಾಂಶುಪಾಲ ಶ್ರೀಶ ಹಾಗೂ ಹಾವು ಪರಿಸರ ರಕ್ಷಕ ಶೇಷಪ್ಪ ಇದ್ದರು.

# ಸ್ಟೂಡೆಂಟ್ಸ್ ಪಿಯು ಕಾಲೇಜು ವಿದ್ಯಾರ್ಥಿಗಳ ಸಾಧನೆ





**ಹಾಸನ:** ನಗರದ ಸ್ಟೂಡೆಂಟ್ಸ್ ಪಿಯು ಕಾಲೇಜಿನ ವಿದ್ಯಾರ್ಥಿಗಳು 2026ರ ಪರೀಕ್ಷೆಯಲ್ಲಿ ಐವರು ವಿದ್ಯಾರ್ಥಿಗಳು ಐದು ಸಾವಿರದ ಒಳಗೆ ರ್‍ಯಾಂಕಿಂಗ್ ಪಡೆದುಕೊಂಡು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಾಲೇಜಿನ ಎಸ್.ಕೆ.ಯುವರಾಜ್ (1173), ಪ್ರಣತಿ ಜಿ. (1732), ಪ್ರಬಲ್ (3683), ರಿಷಿತ್‌ಗೌಡ (3977), ಹರಿಕೃಷ್ಣ (4473) ರ್‍ಯಾಂಕಿಂಗ್ ಪಡೆದಿದ್ದಾರೆ. ಅಲ್ಲದೆ ಸುಮಾರು 20 ವಿದ್ಯಾರ್ಥಿಗಳು ಹತ್ತು ಸಾವಿರದೊಳಗೆ ರ್‍ಯಾಂಕಿಂಗ್ ಪಡೆದು ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ.

2026 ರ ಪರೀಕ್ಷೆಯಲ್ಲಿ ಸಾಧನೆ ಮೆರೆದ ವಿದ್ಯಾರ್ಥಿಗಳನ್ನು ಸ್ಟೂಡೆಂಟ್ಸ್ ಕಾಲೇಜಿನ ಅಧ್ಯಕ್ಷ ಮುರಳಿ ಮೋಹನ್, ಪ್ರಾಂಶುಪಾಲರಾದ ಛಾಯಾದೇವಿ, ಮತ್ತು ಉಪನ್ಯಾಸಕ ವರ್ಗದವರು ಅಭಿನಂದಿಸಿದರು.

